ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 156 | Volume - 02 Issue - 156
ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | RNI No: KARKAN/2023/88462
ಕೆಎ/ಎಸ್‌ಕೆ/ಸಿಟಿಎ–874/2024–2026 | KA/SK/CTA-874/2024-2026
ಚಿತ್ರದುರ್ಗ | Chitradurga
ದಿನಾಂಕ: 08–01–2025 ಬುಧವಾರ | Date: 08-01-2025 Wednesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00

ಒಳಪುಟದ ಸುದ್ದಿಗಳು
ಸರ್ಕಾರದ ನೀತಿ ನಿರೂಪಣೆ ಬಗ್ಗೆ ವಿಮರ್ಶಾತ್ಮಕ ದೃಷ್ಟಿಕೋನ ಬೆಳಸಿಕೊಳ್ಳಿ 2
ದಾವಣಗೆರೆ: ರಾಜ್ಯಮಟ್ಟದ ಯುವಜನೋತ್ಸಕ್ಕೆ ವೈಭವದ ತೆರೆ 3
ಅಕ್ಷರ ಕ್ರಾಂತಿಯುಂಟು ಮಾಡಿದ ಪುಲೆ ದೇಶ ಕಂಡಂತ ಅಪ್ರತಿಮ ದಿಟ್ಟ ಮಹಿಳೆ 4

ಸುದ್ದಿ, ಜಾಹಿರಾತಿಗೆ 9686622252

ದಾಖಲೆಗಳ ಕ್ರೋಢೀಕರಣಕ್ಕೆ ಮೊದಲ ಆದ್ಯತೆ– ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ

# ನಗರದ ರಸ್ತೆ ಅಗಲೀಕರಣ ಖಚಿತ

» **ಚಿತ್ರದುರ್ಗ**

ಕಾನೂನು ತೊಡಕುಗಳು ಉಂಟಾಗದಂತೆ ಎಚ್ಚರಿಕೆ ವಹಿಸಿ, ಚಿತ್ರದುರ್ಗ ನಗರದ ಪ್ರಮುಖ ರಸ್ತೆ ಅಗಲೀಕರಣ ಕಾರ್ಯ ಕೈಗೊಳ್ಳುವಂತೆ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಚಿತ್ರದುರ್ಗ ನಗರದ ಪ್ರಮುಖ ರಸ್ತೆ ಅಗಲೀಕರಣ ಕಾರ್ಯ ಕೈಗೊಳ್ಳುವ ಸಂಬಂಧ ಚಿತ್ರದುರ್ಗ ನಗರಸಭೆಯ ಕಚೇರಿಯಲ್ಲಿ ವಿವಿಧ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಅವರು ಭಾಗವಹಿಸಿ ಮಾತನಾಡಿ, ಮೊದಲ ಹಂತದಲ್ಲಿ ಚಿತ್ರದುರ್ಗ ನಗರದ ಚಳ್ಳಕೆರೆ ಸರ್ಕಲ್‌ನಿಂದ ಕನಕ ವೃತ್ತದವರೆಗೆ ರಸ್ತೆಯ ಮಧ್ಯಭಾಗದಿಂದ 21 ಮೀಟರ್‌ಗಳ ಅಗಲೀಕರಣ ಕಾರ್ಯ ಕೈಗೊಳ್ಳಲು ಈಗಾಗಲೆ ನಿರ್ಧರಿಸಲಾಗಿದೆ. ಚಿತ್ರದುರ್ಗ ನಗರದ ಅಭಿವೃದ್ಧಿಯ ದೃಷ್ಟಿಯಿಂದ ಈ ಕಾರ್ಯವನ್ನು ಕೈಗೊಳ್ಳುವುದು ಖಚಿತ. ಈ ಕಾರ್ಯದಲ್ಲಿ ಯಾವುದೇ ಕಾನೂನು ತೊಡಕುಗಳು ಅಡ್ಡಿಯಾಗದಂತೆ ನೋಡಿಕೊಳ್ಳಲು, ಪೂರಕವಾದ ಸೂಕ್ತ ದಾಖಲಾತಿಗಳು, ನಕ್ಷೆಗಳ ಮೂಲ ಪ್ರತಿಗಳನ್ನು ಸಂಗ್ರಹಿಸಬೇಕು ಎಂದು ನಗರಸಭೆಯ ಅಧಿಕಾರಿಗಳಿಗೆ ಸೂಚನೆ





ನೀಡಿದರು. ದಾಖಲಾತಿಗಳನ್ನು ಸಂಗ್ರಹಿಸಿ, ಶಾಸಕರ ಗಮನಕ್ಕೆ ತರಬೇಕು, ದಾಖಲೆಗಳ ಪರಿಶೀಲನೆ ಬಳಿಕವೇ ಅಗಲೀಕರಣ ಪ್ರಾರಂಭಿಸಬೇಕು. ಈ ಕಾರ್ಯ ಹದಿನೈದು ದಿನಗಳ ಒಳಗಾಗಿ ಪೂರ್ಣಗೊಳ್ಳಬೇಕು. ಈಗಿನ ಪ್ರಮುಖ ರಸ್ತೆ ಈ ಮೊದಲು ರಾಷ್ಟ್ರೀಯ ಹೆದ್ದಾರಿಯಾಗಿತ್ತು, ಹೀಗಾಗಿ ರಸ್ತೆಗೆ ಸಂಬಂಧಿಸಿದ ದಾಖಲೆ ಹಾಗೂ ನಕ್ಷೆಗಳು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಬಳಿ ಲಭ್ಯವಿರುವ ಸಾಧ್ಯತೆಗಳಿವೆ. ಒಟ್ಟಾರೆಯಾಗಿ ಮೂಲ ದಾಖಲೆಗಳನ್ನು ಸಂಗ್ರಹಿಸಿ, ಪರಿಶೀಲಿಸಿ, ರಸ್ತೆ ಅಗಲೀಕರಣಕ್ಕೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ವೀರೇಂದ್ರ ಪಪ್ಪಿ ಅವರು ಸೂಚನೆ ನೀಡಿದರು.

ಚಿತ್ರದುರ್ಗ ನಗರದಲ್ಲಿನ ಜನಸಂಖ್ಯೆ, ವಾಹನಗಳ ಸಂಖ್ಯೆ, ಸಂಚಾರ ದಟ್ಟಣೆ, ಮುಖ್ಯ ರಸ್ತೆಯಲ್ಲಿನ ವ್ಯಾಪಾರ ವಹಿವಾಟು, ಸರಕು ವಾಹನಗಳ ನಿಲುಗಡೆ, ಸಂಚಾರ ನಿಯಮಗಳ ಪಾಲನೆ ಕುರಿತಂತೆ ಸಭೆಯಲ್ಲಿ ಚರ್ಚೆ ನಡೆಸಲಾಯಿತು. ಚಿತ್ರದುರ್ಗ ನಗರವನ್ನು ಉತ್ತಮವಾಗಿ ಅಭಿವೃದ್ಧಿಪಡಿ, ನಗರಸಭೆಯನ್ನು ಮಹಾನಗರಪಾಲಿಕೆಯನ್ನಾಗಿಸುವ ನಿಟ್ಟಿನಲ್ಲಿ ನಗರಸಭೆಯ ಅಧ್ಯಕ್ಷರಾಗಿರುವ ಸುಮಿತಾ ಅವರಿಗೆ ಉತ್ತಮ ಅವಕಾಶವಿದ್ದು, ಈ ನಿಟ್ಟಿನಲ್ಲಿ ಅವರು ಕೂಡ ರಸ್ತೆ ಅಗಲೀಕರಣ ಕಾರ್ಯಕ್ಕೆ ಕೈಜೋಡಿಸುವಂತೆ ಶಾಸಕ ವೀರೇಂದ್ರ ಪಪ್ಪಿ ಅವರು ಮನವಿ ಮಾಡಿದರು. ಸಭೆಯಲ್ಲಿ ಭಾಗವಹಿಸಿದ್ದ ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್ ಅವರು ಚಿತ್ರದುರ್ಗ ನಗರದ ಅಭಿವೃದ್ಧಿಗೆ ಪೂರಕವಾಗಿ ರಸ್ತೆ ಅಗಲೀಕರಣ ಕಾರ್ಯವನ್ನು ಯಾವುದೇ ಕಾನೂನು ತೊಡಕು ಬಾರದ ರೀತಿಯಲ್ಲಿ, ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು, ಬಳಿಕವೇ ಅಗಲೀಕರಣ ನಡೆಸುವಂತೆ ಸಲಹೆ ನೀಡಿದ್ದಾರೆ ಎಂದು ಶಾಸಕರು ಮಾಹಿತಿ ನೀಡಿದರು. ಸಭೆಯಲ್ಲಿ ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್, ನಗರಸಭೆ ಅಧ್ಯಕ್ಷೆ ಸುಮಿತಾ, ಪೌರಾಯುಕ್ತೆ ರೇಣುಕಾ, ವಿಶೇಷ ಭೂಸ್ವಾಧೀನಾಧಿಕಾರಿ ವೆಂಕಟೇಶ್ ನಾಯಕ್, ಲೋಕೋಪಯೋಗಿ ಇಲಾಖೆ ಎಇಇ ಚಂದ್ರಪ್ಪ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಎಇಇ ನವೀನ್, ನಗರಸಭೆ ಕಾನೂನು ಸಲಹೆಗಾರ ಉಮೇಶ್, ನಗರಸಭೆ ಎಇಇ ಸತ್ಯನಾರಾಯಣ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅಪ್ರಾಪ್ತಬಾಲಕಿ ಇಬ್ಬರು ಮಕ್ಕಳನ್ನು ಕರುಣಿಸಿದ ವ್ಯಕ್ತಿ ವಿರುದ್ಧ ಪೋಕ್ಸೋ ಪ್ರಕರಣ

» **ಚಳ್ಳಕೆರೆ**

ಅಪ್ರಾಪ್ತಬಾಲಕಿಯನ್ನು ಮದುವೆಯಾಗಿ ಅವಳಿಗೆ ಎರಡು ಮಕ್ಕಳನ್ನು ಪಡೆಯುವಂತೆ ಮಾಡಿದ ಸೂಜಿಮಲ್ಲೇಶ್ವರನಗರದ ಲತೀಫ್(22) ಎಂಬ ವ್ಯಕ್ತಿಯ ವಿರುದ್ಧ ಬಾಲ್ಯವಿವಾಹ ಹಾಗೂ ಅಪ್ರಾಪ್ತ ಬಾಲಕಿಗೆ ಲೈಗಿಂಕ ಹಿಂಸೆ ನೀಡಿ ಪ್ರಕಣವೊಂದು ದಾಖಲಾಗಿದೆ.



ಸೂಜಿಮಲ್ಲೇಶ್ವರನಗರದ ನಿವಾಸಿ ಲತೀಫ್ ತಾಲ್ಲೂಕಿನ ತಿಮ್ಮಾಲಪುರದ ಅಪ್ರಾಪ್ತ ಬಾಲಕಿಯನ್ನು ಕಾನೂನು ವಿರುದ್ಧ ಪ್ರೀತಿಸಿ ಮದುವೆಯಾಗಿದ್ದು, ಪ್ರಸ್ತುತ ಚಿಂತಾಮಣಿ ತಾಲ್ಲೂಕಿನ ರಾಮಕುಂಟೆ ಗ್ರಾಮದಲ್ಲಿ ಆಕೆಯೊಂದಿಗೆ ವಾಸವಿದ್ದು, ಆಕೆಗೆ 2023ರಲ್ಲಿ ಒಂದು ಹೆಣ್ಣು ಮಗು, 2024ರಲ್ಲಿ ಒಂದು ಗಂಡುಮಗು ಜನ್ಮನೀಡಲು ಕಾರಣನಾಗಿರುತ್ತಾನೆ. ಅಪ್ರಾಪ್ತಬಾಲಕಿಯನ್ನು ಪ್ರೀತಿಸಿ ಮದುವೆಯಾಗಿದ್ದಲ್ಲದೆ, ಲೈಗಿಂಕವಾಗಿ ಆಕೆಯನ್ನುದುರುಪಯೋಗಪಡಿಸಿಕೊಂಡು ಎರಡು ಮಕ್ಕಳನ್ನು ನೀಡಿದ ಹಿನ್ನೆಲೆಯಲ್ಲಿ ಚಿಂತಾಮಣಿಯ ಮಹಿಳಾಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಮಾಹಿತಿ ಸಂಗ್ರಹಿಸಿ ಅಲ್ಲಿನ ಠಾಣೆಗೆ ದೂರು ನೀಡಿರುತ್ತಾರೆ. ಚಿಂತಾಮಣಿ ಪೊಲೀಸರು ಅಪ್ರಾಪ್ತಬಾಲಕಿ ಮತ್ತು ಆರೋಪಿ ಲತೀಫ್ ಚಳ್ಳಕೆರೆ ತಾಲ್ಲೂಕಿನವರಾಗಿದ್ದು ಚಿತ್ರದುರ್ಗ ಜಿಲ್ಲಾ ಪೊಲೀಸ್ ಅಧಿಕಾರಿಗಳಿಗೆ ಪ್ರಕರಣ ದಾಖಲಿಸಿ ವರ್ಗಾವಣೆ ಮಾಡಿರುತ್ತಾರೆ. ಜಿಲ್ಲಾ ಪೊಲೀಸ್ ಕಚೇರಿಯಿಂದ ಮಾಹಿತಿ ಪಡೆದ ಇಲ್ಲಿನ ಠಾಣಾ ಪಿಎಸ್‌ಐ ಕೆ.ಸತೀಶ್‌ನಾಯ್ಕ ಆರೋಪಿ ಲತೀಫ್ ವಿರುದ್ಧ ಬಾಲ್ಯವಿವಾಹ ತಡೆ ಕಾಯ್ದೆ ಮತ್ತು ಪೋಕ್ಸೋ ಪ್ರಕರಣ ದಾಖಲು ಮಾಡಿರುತ್ತಾರೆ. ನೊಂದಬಾಲಕಿಯನ್ನು ಚಿತ್ರದುರ್ಗದ ನಿರಾಶಿತ ಕೇಂದ್ರಕ್ಕೆ ಕಳಿಸಲಾಗಿದ್ದು ಆರೋಪಿ ಲತೀಫ್‌ನನ್ನು ಪೊಲೀಸರು ಬಂಧಿಸಿ ಕ್ರಮಕೈಗೊಂಡಿದ್ದಾರೆ.

### "ಯುವನಿಧಿ" ವಿಶೇಷ ನೋಂದಣಿ ಅಭಿಯಾನ

» **ಚಿತ್ರದುರ್ಗ**

ಕರ್ನಾಟಕ ರಾಜ್ಯದ ಮಹತ್ವಾಕಾಂಕ್ಷಿ ಯೋಜನೆಯಾದ "ಯುವನಿಧಿ" ಯೋಜನೆಯಲ್ಲಿ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೊಮಾ 2022–23ನೇ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023 ಮತ್ತು 2024ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿನಗಳನ್ನು ಪೂರೈಸಿದ ಅಭ್ಯರ್ಥಿಗಳಿಗೆ ಇದೇ ಜ.20 ರವರೆಗೆ "ಯುವನಿಧಿ" ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಎಸ್.ಎಸ್.ಎಲ್.ಸಿ, ಪಿಯುಸಿ, ಪದವಿ, ಡಿಪ್ಲೊಮಾ ಪ್ರಮಾಣ ಪತ್ರ ಸೇರಿದಂತೆ ನೋಂದಣಿಗೆ ಅಗತ್ಯವಿರುವ ದಾಖಲಾತಿಗಳೊಂದಿಗೆ http://sevasindhugs.karnataka.gov.in ನಲ್ಲಿ ಆನ್‌ಲೈನ್‌ನಲ್ಲಿ ನೋಂದಾಯಿಸುವುದು. ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರ, ಕಾಲೇಜು, ವಿವಿ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಸಹಾಯವಾಣಿ ಸಂಖ್ಯೆ 18005997154, ದೂರವಾಣಿ ಸಂಖ್ಯೆ 9945587060 ಗೆ ಸಂಪರ್ಕಿಸಬಹುದು.

### ನವೋದಯ ವಿದ್ಯಾಲಯ: ಜ.18ರಂದು ಪರೀಕ್ಷೆ

» **ಚಿತ್ರದುರ್ಗ**

ಜಿಲ್ಲೆಯ ಜವಾಹರ್ ನವೋದಯ ವಿದ್ಯಾಲಯ 2025–26ನೇ ಸಾಲಿಗೆ ಪ್ರವೇಶ ಪರೀಕ್ಷೆಯು ಇದೇ ಜ.18ರಂದು ಬೆಳಿಗ್ಗೆ 11ಕ್ಕೆ ಜಿಲ್ಲೆಯ ಆಯಾ ತಾಲ್ಲೂಕಿನಲ್ಲಿ ನಿಗಧಿಪಡಿಸಿದ ಪರೀಕ್ಷೆ ಕೇಂದ್ರದಲ್ಲಿ ನಡೆಯಲಿದೆ. ಪೋಷಕರು https://cbseitms.rcil.gov.in/nvs/AdminCard/AdomCard ಈ ವೆಬ್‌ಸೈಟ್‌ನಿಂದ ಪ್ರವೇಶ ಪತ್ರಗಳನ್ನು ಡೌನ್ಲೋಡ್ ಮಾಡಿಕೊಂಡು ಪ್ರವೇಶ ಪತ್ರದಲ್ಲಿ ನಮೂದಿಸಿದ ಪರೀಕ್ಷಾ ಕೇಂದ್ರಕ್ಕೆ ಸಮಯಕ್ಕೆ ಸರಿಯಾಗಿ ಅಗತ್ಯ ದಾಖಲೆಗಳೊಂದಿಗೆ ಪರೀಕ್ಷೆಗೆ ತಪ್ಪದೇ ಹಾಜರಾಗಬೇಕು.

ಜಿಲ್ಲಾಧಿಕಾರಿ ಟಿ. ವೆಂಕಟೇಶ್‌ರಿಂದ ಸ್ಥಳ ಪರಿಶೀಲನೆ

## ವಿವಿ ಸಾಗರಕ್ಕೆ ಶೀಘ್ರ ಮುಖ್ಯಮಂತ್ರಿಗಳಿಂದ ಬಾಗಿನ

» **ಚಿತ್ರದುರ್ಗ**

ಬಯಲುಸೀಮೆಯ ಜನರ ಜೀವನಾಡಿ ವಾಣಿ ವಿಲಾಸ ಸಾಗರ ಜಲಾಶಯ ಕೋಡಿ ಬೀಳಲು ಕ್ಷಣಗಣನೆ ಪ್ರಾರಂಭವಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶೀಘ್ರವೇ ಜಿಲ್ಲೆಗೆ ಆಗಮಿಸಿ ಭರ್ತಿಯಾಗಿರುವ ವಾಣಿವಿಲಾಸ ಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ. ಸಿಇಒ ಎಸ್.ಜೆ. ಸೋಮಶೇಖರ್ ಅವರು ಮಂಗಳವಾರದಂದು ವಿವಿ ಸಾಗರಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ವಾಣಿವಿಲಾಸ ಸಾಗರ ಜಲಾಶಯಕ್ಕೆ ನಿತ್ಯ ಭದ್ರಾದಿಂದ 693 ಕ್ಯೂಸೆಕ್ ನೀರು ಒಳಹರಿವಿದ್ದು, ಮಂಗಳವಾರದಂದು ಜಲಾಶಯದ ನೀರಿನ ಮಟ್ಟ 129.80 ಅಡಿಗೆ ತಲುಪಿದೆ. ಹೀಗಾಗಿ ನೀರಿನ ಮಟ್ಟ ಜಲಾಶಯದ ಗರಿಷ್ಟ ಮಟ್ಟ 130 ಅಡಿಗೆ ತಲುಪಿ, ಹೆಚ್ಚುವರಿ ನೀರು ಕೋಡಿ



ಮೂಲಕ ಹರಿದುಹೋಗಲಿದೆ. ಜಲಾಶಯ ಸಂಪೂರ್ಣ ಭರ್ತಿಯಾಗುತ್ತಿರುವುದು ಇಡೀ ಜಿಲ್ಲೆಗೆ ಸಂತಸದ ಕ್ಷಣವಾಗಿದ್ದು, ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಶೀಘ್ರವೇ ಜಿಲ್ಲೆಗೆ ಆಗಮಿಸಿ, ಭರ್ತಿಯಾಗಿರುವ ವಿ.ವಿ. ಸಾಗರ ಜಲಾಶಯಕ್ಕೆ ಬಾಗಿನ ಅರ್ಪಣೆ ಮಾಡಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಶಾಸಕರುಗಳು, ಜನಪ್ರತಿನಿಧಿಗಳು, ಉನ್ನತ ಅಧಿಕಾರಿಗಳು ಕೂಡ ಈ ಕ್ಷಣಕ್ಕೆ ಕಾತರರಾಗಿದ್ದು, ಬಾಗಿನ ಅರ್ಪಣೆ ಕಾರ್ಯಕ್ರಮ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ. ಸಿಇಒ ಸೋಮಶೇಖರ್ ಅವರು ಮಂಗಳವಾರದಂದು ವಿವಿ ಸಾಗರ ಜಲಾಶಯ ಪ್ರದೇಶಕ್ಕೆ ಭೇಟಿ ನೀಡಿ, ಕೋಡಿ ಬೀಳುವ ಸ್ಥಳ, ಬಾಗಿನ ಅರ್ಪಣೆಗೆ ಸೂಕ್ತ ಸ್ಥಳ ನಿಗದಿಪಡಿಸುವುದು, ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳ ಆಗಮನಕ್ಕೆ ಸೂಕ್ತ ಹೆಲಿಪ್ಯಾಡ್ ಸೇರಿದಂತೆ ವಿವಿಧ ಸಿದ್ಧತೆಗಳನ್ನು ಕೈಗೊಳ್ಳುವ ಸಲುವಾಗಿ ಸ್ಥಳ ಪರಿಶೀಲನೆ ನಡೆಸಿದರು.ಈ ಸಂದರ್ಭದಲ್ಲಿ ಭದ್ರಾ ಮೇಲ್ದಂಡೆ ಯೋಜನೆಯ ಕಾರ್ಯಪಾಲಕ ಅಭಿಯಂತರ ಬಾರಿಕರ ಚಂದ್ರಪ್ಪ, ಸಹಾಯಕ ಕಾರ್ಯಪಾಲಕ ಅಭಿಯಂತರ ಚಂದ್ರಶೇಖರಯ್ಯ, ಸಹಾಯಕ ಅಭಿಯಂತರ ವೆಂಕಟೇಶ್, ತಹಸಿಲ್ದಾರ್ ರಾಜೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗಣ್ಯರು, ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

## ಅಹಿತಕರ ಘಟನೆಗಳನ್ನು ನಿಯಂತ್ರಿಸಲು ಸಹಕರಿಸಿ; ಇಒ



» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಮಹಿಳಾ ಸಮುದಾಯಕ್ಕೆ ಪೊಲೀಸ್ ಇಲಾಖೆಯೂ ಸೇರಿದಂತೆ ಹಲವಾರು ರೀತಿಯ ರಕ್ಷಣೆಗಳಿದ್ದರೂ ಸಹ ಮಹಿಳೆ ಮೇಲೆ ನಿರಂತರ ದೌರ್ಜನ್ಯ ನಡೆಯುತ್ತಿದ್ದು, ಇದನ್ನು ಪೂರ್ಣಪ್ರಮಾಣದಲ್ಲಿ ತಡೆಯುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಮ್ಮಿಕೊಂಡಿದ್ದ ಲಿಂಗಾಧಾರಿತ ದೌರ್ಜನ್ಯಕುರಿತು ಏರ್ಪಡಿಸಿದ್ದ ಜಾಗೃತಿಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಪುಟ ↘ 2

ಪ್ರಮುಖ ಸುದ್ದಿ

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

## ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆಗೆ ಸಿದ್ಧತೆ

» **ಚಿತ್ರದುರ್ಗ**

ಜಿಲ್ಲಾ ಕೇಂದ್ರದಲ್ಲಿ ಸರ್ಕಾರದ ವತಿಯಿಂದ ಜ. 14 ರಂದು ಶಿವಯೋಗಿ ಸಿದ್ಧರಾಮೇಶ್ವರರ ಜಯಂತಿ ಹಾಗೂ ಜ. 19 ರಂದು ಮಹಾಯೋಗಿ ವೇಮನ ರವರ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಿವಯೋಗಿ ಸಿದ್ಧರಾಮೇಶ್ವರರ ಜಯಂತಿ ಹಾಗೂ ಮಹಾಯೋಗಿ ವೇಮನ ರವರ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಆಚರಿಸುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಶಿವಯೋಗಿ ಸಿದ್ಧರಾಮೇಶ್ವರರ ಜಯಂತಿ: ಸಿದ್ಧರಾಮೇಶ್ವರರ ಜಯಂತಿಯನ್ನು ಜ. 14 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಸಭಾಂಗಣದಲ್ಲಿಅರ್ಥಪೂರ್ಣವಾಗಿ ಆಚರಿಸಲು ಸಮಾಜದ ಮುಖಂಡರು ಸಲಹೆ ನೀಡಿದರು. ಇದಕ್ಕೆ ಸಮ್ಮತಿ ವ್ಯಕ್ತಪಡಿಸಿದ ಅಪರ ಜಿಲ್ಲಾಧಿಕಾರಿಗಳು,



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸರ್ಕಾರದ ಶಿಷ್ಠಾಚಾರ ಪಾಲಿಸಿಕೊಂಡು, ಅರ್ಥಪೂರ್ಣವಾಗಿ ಆಚರಿಸಲಾಗುವುದು.

ಶಿವಯೋಗಿ ಸಿದ್ಧರಾಮೇಶ್ವರರ ಕುರಿತಾದ ಸುಗಮ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗುವುದು, ಅಲ್ಲದೆ ಇವರ ಕುರಿತಾದ ವಿಶೇಷ ಉಪನ್ಯಾಸಕ್ಕಾಗಿ ಸಂಪನ್ಮೂಲ ವ್ಯಕ್ತಿಯನ್ನು ಗುರುತಿಸಿ, ಆಹ್ವಾನಿಸಲಾಗುವುದು. ಶಿಷ್ಠಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ, ವಿತರಣೆಗೆ ಕ್ರಮ ವಹಿಸಲಾಗುವುದು. ಶಿವಯೋಗಿ ಸಿದ್ಧರಾಮೇಶ್ವರರ ಭಾವಚಿತ್ರಕ್ಕೆ ಪುಷ್ಪಾಲಂಕಾರ ವ್ಯವಸ್ಥೆ ಕೈಗೊಂಡು, ವಿಶೇಷವಾಗಿ ಆಚರಿಸಲಾಗುವುದು. ಈ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್, ಜಿಲ್ಲಾ ಬೋವಿ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಕಾರ್ಯದರ್ಶಿ ಹೆಚ್. ಲಕ್ಷ್ಮಣ, ಖಜಾಂಚಿ ಇ. ಮಂಜುನಾಥ್, ಬೋವಿ ಗುರುಪೀಠದ ಸಿಇಒ ಗೋವಿಂದಪ್ಪ ಸೇರಿದಂತೆ ಸಮಾಜದ ಹಲವು ಮುಖಂಡರು ಪಾಲ್ಗೊಂಡಿದ್ದರು.

ಮಹಾಯೋಗಿ ವೇಮನ ಜಯಂತಿ: ಸಮಾಜದ ಮುಖಂಡರ ಸಲಹೆಯಂತೆ ವೇಮನರ ಜಯಂತಿಯನ್ನು ಜ. 19 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಹಿಂಭಾಗದ ಪತ್ರಿಕಾ ಭವನದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು.

ಮಹಾಯೋಗಿ ವೇಮನರ ಕುರಿತಾದ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗುವುದು, ಅಲ್ಲದೆ ವೇಮನರ ಕುರಿತು ವಿಶೇಷ ಉಪನ್ಯಾಸ ಏರ್ಪಡಿಸಲಾಗುವುದು. ಶಿಷ್ಠಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ, ವಿತರಣೆಗೆ ಕ್ರಮ ವಹಿಸಲಾಗುವುದು. ಮಹಾಯೋಗಿ ವೇಮನರ ಭಾವಚಿತ್ರಕ್ಕೆ ಪುಷ್ಪಾಲಂಕಾರ ವ್ಯವಸ್ಥೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು. ಎಲ್ಲ ಸಮಾಜದ ಬಾಂಧವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು,ಯಶಸ್ವಿಗೊಳಿಸಬೇಕುಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಈ ಸಂದರ್ಭದಲ್ಲಿ ಮನವಿ ಮಾಡಿದರು.ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್, ರೆಡ್ಡಿ ಸಮಾಜದ ಮುಖಂಡರುಗಳಾದ ಇಂಟೂರು ಜಯರಾಮರೆಡ್ಡಿ, ಜಿ.ಹೆಚ್. ವಿಜಯಕುಮಾರ್, ಕಟ್ಟಾ ತಿಪ್ಪಾರೆಡ್ಡಿ, ಕೆ.ಆರ್. ಬಾಬುರೆಡ್ಡಿ, ಹನುಮಂತರೆಡ್ಡಿ, ಡಿ.ಪಿ. ತಿಪ್ಪೇಸ್ವಾಮಿ, ಶಿವಣ್ಣ ರೆಡ್ಡಿ, ವೆಂಕಟಶಿವರೆಡ್ಡಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಅಹಿತಕರ ಘಟನೆಗಳನ್ನು ನಿಯಂತ್ರಿಸಲು ಸಹಕರಿಸಿ

» ಮೊದಲ ಪುಟದಿಂದ

ಸರ್ಕಾರ ಮಹಿಳೆಯರ ಸಂರಕ್ಷಣೆಗೆ ಅನೇಕ ರೀತಿಯ ರಕ್ಷಣ ಕ್ರಮಗಳನ್ನು ಜಾರಿಗೊಳಿಸಿದೆ. ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸಕ್ಕೆ ಎಲ್ಲರ ಸಹಕಾರಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ತಾಲ್ಲೂಕು ಅಧಿಕಾರಿ ಹರಿಪ್ರಸಾದ್ ಮಾತನಾಡಿ, ಲಿಂಗಾಧಾರಿತ ದೌರ್ಜನ್ಯ ಪೂರ್ಣಪ್ರಮಾಣದಲ್ಲಿ ತಡೆಯುವ ನಿಟ್ಟಿನಲ್ಲಿ ನಮ್ಮ ಇಲಾಖೆ ಹಲವಾರು ಕ್ರಮಗಳನ್ನು ಕೈಗೊಂಡಿದೆ. ಪೊಲೀಸರ ಕಣ್ಣುತಪ್ಪಿಸಿ ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಾಯವಾಣಿಯೂ ಸೇರಿದಂತೆ ಸಖಿ ಕೇಂದ್ರಗಳನ್ನು ಪ್ರಾರಂಭಿಸುವ ಮೂಲಕ ಮಹಿಳಾ ರಕ್ಷಣೆಗೆ ಮುಂದಾಗಿದೆ ಎಂದು ತಿಳಿಸಿದರು.ಜಿಲ್ಲಾ ಸಂರಕ್ಷಣಾಧಿಕಾರಿ ಗೀತ, ಎಸಿಡಿಪಿಒ ಜಯಶ್ರೀ, ಶಾಂತವೀರಮ್ಮ, ಸುಮಲತ, ನಾಗರತ್ನ ಉಪಸ್ಥಿತರಿದ್ದರು.

### ವಿಠಲನಗರ : ಮನೆಯ ಇಂಟರ್‌ಲಾಕ್ ಮುರಿದು ನಗದು ಹಣ ಹಾಗೂ ಆಭರಣ ಕಳವು

» ಚಳ್ಳಕೆರೆ

ಕಳೆದ ಕೆಲವು ದಿನಗಳಿಂದ ನಿಯಂತ್ರಣದಲ್ಲಿದ್ದ ಕಳ್ಳತನ ಪ್ರಕರಣಗಳು ಮತ್ತೆ ಆರಂಭವಾಗಿದ್ದು ವಿಠಲನಗರದ ಶಿಕ್ಷಕರ ಮನೆಯ ಇಂಟರ್‌ಲಾಕ್ ಬೀಗ ಮುರಿದು ನಗದುಹಣ ಹಾಗೂ ಬಂಗಾರದ ಆಭರಣ ಕಳ್ಳತನ ಮಾಡಿದ ಪ್ರಕರಣ ವರದಿಯಾಗಿದೆ. ವೃತ್ತಿಯಲ್ಲಿ ಶಿಕ್ಷಕರಾದ ಎಚ್. ಹನುಮಂತಪ್ಪ ವಿಠಲನಗರದ ಶಟಲಕೋರ್ಟ್ ಹಿಂಭಾಗದಲ್ಲಿ ವಾಸವಿದ್ದು ಜ.6ರ ಸೋಮವಾರ ಮಧ್ಯಾಹ್ನ ಮನೆಗೆ ಇಂಟರ್‌ಲಾಕ್ ಹಾಕಿ ಟಿ.ಎನ್. ಕೋಟೆಗೆ ಹೋಗಿದ್ದು ಜ.7ರ ಮಂಗಳವಾರ ಬೆಳಗ್ಗೆ 8.30ರ ಸಮಯದಲ್ಲಿ ವಾಪಾಸ್ ಬಂದು ಮನೆಯ ಬೀಗ ತೆರೆಯಲು ನೋಡಿದಾಗ ಮನೆ ಬಾಗಿಲು ತೆರೆದಿರುತ್ತದೆ. ಗಾಬರಿಗೊಂಡ ಅವರು ಒಳಗೆ ಹೋಗಿ ನೋಡಿದಾಗ ಕಬ್ಬಿಣದ ಗಾಡ್ರೇಜ್ ಬೀರ್ ಓಪನಾಗಿದ್ದು ಅದರಲ್ಲಿದ್ದ 4 ನಗದು ಹಣ, 35 ಸಾವಿರ ಉಂಗುರ, ಕಿವಿಓಲೆ ಕಳ್ಳತನವಾಗಿರುತ್ತದೆ. ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಗಾಂಧಿನಗರ: ಲಕ್ಷ್ಮಿದೇವಿ ನಿಧನ: ಇಂದು ಅಂತ್ಯಕ್ರಿಯೆ

» ಚಳ್ಳಕೆರೆ



ಇಲ್ಲಿನ ಗಾಂಧಿನಗರ ಸಂಪಿಗೆಬೀದಿ ನಿವಾಸಿ, ನಿವೃತ್ತ ಶಿಕ್ಷಕ ದಿವಂಗತ ಕೆ.ಎಂ. ಸತ್ಯನಾರಾಯಣಪ್ಪರವರ ಪತ್ನಿ ಕಮ್ಮದೂರಿನ ಲಕ್ಷ್ಮಿದೇವಿ(79) ವಯೋ ಸಹಜ ಕಾಯಿಲೆಯಿಂದ ಅವರ ನಿವಾಸದಲ್ಲಿ ಮಂಗಳವಾರ ಸಂಜೆ ನಿಧನರಾದರು. ಮೃತ ಲಕ್ಷ್ಮಿದೇವಿಯವರ ಅಂತ್ಯಕ್ರಿಯೆ ಜ.8ರ ಬುಧವಾರ ಬೆಳಗ್ಗೆ 11ಗಂಟೆಗೆ ಪಾವಗಡ ರಸ್ತೆಯ ವೈಕುಂಠಧಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತ ಲಕ್ಷ್ಮಿದೇವಿ, ನಾಲ್ವರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ.

### ನವೋದಯ ವಿದ್ಯಾಲಯ: ಜ.18ರಂದು ಪರೀಕ್ಷೆ

» ಚಿತ್ರದುರ್ಗ

ಜಿಲ್ಲೆಯ ಜವಾಹರ್ ನವೋದಯ ವಿದ್ಯಾಲಯ 2025-26ನೇ ಸಾಲಿಗೆ ಪ್ರವೇಶ ಪರೀಕ್ಷೆಯು ಇದೇ ಜ.18ರಂದು ಬೆಳಿಗ್ಗೆ 11ಕ್ಕೆ ಜಿಲ್ಲೆಯ ಆಯಾ ತಾಲ್ಲೂಕಿನಲ್ಲಿ ನಿಗಧಿಪಡಿಸಿದ ಪರೀಕ್ಷೆ ಕೇಂದ್ರದಲ್ಲಿ ನಡೆಯಲಿದೆ. ಪೋಷಕರುಃಣಣಿs:// cbseitms.rcil.gov.in/nvs/ AdminCard/AdomCard ಈ ವೆಬ್‌ಸೈಟ್‌ನಿಂದ ಪ್ರವೇಶ ಪತ್ರಗಳನ್ನು ಡೌನ್ಲೋಡ್ ಮಾಡಿಕೊಂಡು ಪ್ರವೇಶ ಪತ್ರದಲ್ಲಿ ನಮೂದಿಸಿದ ಪರೀಕ್ಷಾ ಕೇಂದ್ರಕ್ಕೆ ಸಮಯಕ್ಕೆ ಸರಿಯಾಗಿ ಅಗತ್ಯ ದಾಖಲೆಗಳೊಂದಿಗೆ ಪರೀಕ್ಷೆಗೆ ತಪ್ಪದೇ ಹಾಜರಾಗಬೇಕು.

### ಶೈಕ್ಷಣಿಕ ಕಾರ್ಯಾಗಾರ

» ಚಿತ್ರದುರ್ಗ

ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಇದೇ ಜ.09ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ ಜಿಲ್ಲಾಮಟ್ಟದ ಸಮಾಜ ವಿಜ್ಞಾನ ಶಿಕ್ಷಕರ ಶೈಕ್ಷಣಿಕ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಸರ್ಕಾರಿ, ಅನುದಾನಿತ, ಅನುದಾನರಹಿತ ಮತ್ತು ವಸತಿ ಪ್ರೌಢಶಾಲೆಗಳಲ್ಲಿ ಸಮಾಜ ವಿಜ್ಞಾನ ಶಿಕ್ಷಕರಿಗಾಗಿ ಸಮಾಜ ವಿಜ್ಞಾನ ಬೋಧನೆಯಲ್ಲಿ ಎಸ್‌ಎಸ್‌ಎಲ್‌ಸಿ ಮಕ್ಕಳನ್ನು ಪರೀಕ್ಷೆಗೆ ಸಿದ್ಧಗೊಳಿಸುವುದು ಹೇಗೆ? ವ್ಯಕ್ತಿತ್ವ ವಿಕಸನ, ಆತ್ಮವಿಶ್ವಾಸ, ಉತ್ಸಾಹ ಅತ್ಯುತ್ತಮ ಶಿಕ್ಷಕರಾಗುವುದು ಹೇಗೆ? ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಪ್ರೇರಣೆ ಮುಂತಾದ ವಿಚಾರಗಳಿಗೆ ಸಂಬಂಧಿಸಿದಂತೆ ರಾಜ್ಯ ಸಂಪನ್ಮೂಲ ವ್ಯಕ್ತಿ ಚೇತನ್‌ರಾಮ್ ಮೈಸೂರು ಅವರಿಂದ ವ್ಯಕ್ತಿ ವಿಕಸನ ಕಾರ್ಯಾಗಾರ ಏರ್ಪಡಿಸಲಾಗಿದೆ ಎಂದು ಉಪನಿರ್ದೇಶಕ ಮಂಜುನಾಥ್ ಹೇಳಿದರು.

ಹಿರಿಯೂರು ತಾಲ್ಲೂಕಿನ ಮಾದೇನಹಳ್ಳಿಯಲ್ಲಿ ಪ್ರಾತ್ಯಕ್ಷಿಕೆ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ವೀಕ್ಷಣೆ

# ಅನಿಲ ಸೋರಿಕೆ ತಡೆ: ಅಣಕು ಕಾರ್ಯಾಚರಣೆ

» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಜೆ.ಜೆ. ಹಳ್ಳಿ ಹೋಬಳಿ ದಿಂಡಾವರ ಪಂಚಾಯಿತಿ ವ್ಯಾಪ್ತಿಯ ಮಾದೇನಹಳ್ಳಿ ಗ್ರಾಮದಲ್ಲಿ ಮಂಗಳವಾರ ಅನಿಲ ಸೋರಿಕೆ ಸಂದರ್ಭದ ಬಿಕ್ಕಟ್ಟು ನಿರ್ವಹಣೆಗೆ ಸಂಬಂಧಿಸಿದಂತೆ ಅಣಕು ಪ್ರಾತ್ಯಕ್ಷಿಕೆ ಕಾರ್ಯಚರಣೆ ನಡೆಸಲಾಯಿತು.

ಅನಿಲ ಸೋರಿಕೆ ತಡೆಗಟ್ಟುವಿಕೆ ತುರ್ತು ಅಣಕು ಕಾರ್ಯಾಚರಣೆಯನ್ನು ಹಾಸನ-ಚೆರ್ಲಪಲ್ಲಿ ಎಲ್‌ಪಿಜಿ ಪೈಪ್‌ಲೈನ್‌ನ ಹೆಚ್‌ಸಿಪಿಎಲ್ ಚೈನೇಜ್ 123ರಲ್ಲಿ ಆಫ್‌ಸೈಟ್-ಅಣುಕು ಪ್ರಾತ್ಯಕ್ಷಿಕೆ ಹಮ್ಮಿಕೊಳ್ಳಲಾಯಿತು.





ಅನಿಲ ಸೋರಿಕೆ ಪ್ರಾತ್ಯಕ್ಷಿಕೆ: ಅಣಕು ಪ್ರದರ್ಶನದಡಿ ಹಾಸನ-ಚೆರ್ಲಪಲ್ಲಿ ಎಲ್‌ಪಿಜಿ ಪೈಪ್‌ಲೈನ್‌ನ ಹೆಚ್‌ಸಿಪಿಎಲ್ ಚೈನೇಜ್ 123ರ ಮಾದೇನಹಳ್ಳಿ ಗ್ರಾಮದಲ್ಲಿ ಅನಿಲ ಸೋರಿಕೆಯಾದ ಮಾಹಿತಿ ಭದ್ರತಾ ಸಿಬ್ಬಂದಿಯಿಂದ ನಿಯಂತ್ರಣ ಕೊಠಡಿ ಅಧಿಕಾರಿಗೆ ವಾಕಿಟಾಕಿ ಮೂಲಕ ಪರಸ್ಪರ ಸಂವಹನ ನಡೆಯುತ್ತದೆ. ತಕ್ಷಣವೇ ಭದ್ರತಾ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ಅನಿಲ ಸೋರಿಕೆಯಾದ ಸ್ಥಳದ ಸುತ್ತಮುತ್ತ ತುರ್ತು ಪರಿಸ್ಥಿತಿ ಘೋಷಿಸುತ್ತಾರೆ. ತಕ್ಷಣವೇ ಅನಿಲ ಸೋರಿಕೆ ಸಿಬ್ಬಂದಿ, ಅಂಬುಲೆನ್ಸ್ ಹಾಗೂ ವೈದ್ಯಕೀಯ ತಂಡವೂ ಬರುತ್ತದೆ. ನಂತರ ಸಿಬ್ಬಂದಿ ಅನಿಲ ಸೋರಿಕೆಯಾದ ಸ್ಥಳ ಪರಿಶೀಲಿಸಿ ಅಸ್ವಸ್ಥಗೊಂಡ ಭದ್ರತಾ ಸಿಬ್ಬಂದಿಯನ್ನು ವೈದ್ಯಕೀಯ ತಂಡದವರು ಪ್ರಥಮ ಚಿಕಿತ್ಸೆ ನೀಡಿ ಅಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ಸಾಗಿಸುತ್ತಾರೆ. ಹೀಗೆ ಭದ್ರತೆ, ರಕ್ಷಣೆ, ಅಗ್ನಿಶಾಮಕದಳದ ಸಿಬ್ಬಂದಿಯ ಕಾರ್ಯಾಚರಣೆ ಹಂತ ಹಂತವಾಗಿ ನಡೆಯುತ್ತದೆ. ಅಂತಿಮವಾಗಿ ಎಲ್‌ಪಿಜಿ ಸೋರಿಕೆಯನ್ನು ಯಶಸ್ವಿಯಾಗಿ ನಿಲ್ಲಿಸಲಾಗಿದೆ ಎಂದು ಅಧಿಕಾರಿಗಳಿಗೆ ದೃಢಪಡಿಸಲಾಯಿತು. ನಂತರ ಸೈರನ್ ಮೊಳಗಿಸಿ, ಹಸಿರು ಬಾವುಟ ಹಾರಿಸಲಾಯಿತು. ಚಿತ್ರದುರ್ಗ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಹಾಸನದ ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ ಸಹಯೋಗದೊಂದಿಗೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಬಲವರ್ಧನೆ ಸಂಬಂಧ ಆಯೋಜಿಸಲಾಗಿದ್ದ ಅಣಕು ಪ್ರದರ್ಶನ ಕಾರ್ಯಕ್ರಮ ವೀಕ್ಷಿಸಿ ಮಾತನಾಡಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅನಿಲ ಸೋರಿಕೆ ಸಂದರ್ಭದಲ್ಲಿನ ಬಿಕ್ಕಟ್ಟು ಪರಿಸ್ಥಿತಿಯನ್ನು, ಸಂಭವಿಸುವ ಅನಾಹುತವನ್ನು ಯಾವ ರೀತಿಯಾಗಿ ನಿಭಾಯಿಸುವುದು ಹಾಗೂ ಯಾವ ರೀತಿಯ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಬೇಕು ಎಂಬುದನ್ನು ಅಣಕು ಪ್ರದರ್ಶನದ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗಿದೆ ಎಂದರು.

ಅನಿಲ ಸೋರಿಕೆಯ ದುರಂತದಿಂದ ಸಾಕಷ್ಟು ನಷ್ಟ ಉಂಟಾಗುತ್ತದೆ. ಇಂತಹ ವಿಪತ್ತು ಸಂಭವಿಸಿದಾಗ ಯಾವ ರೀತಿ ಇದನ್ನು ತಡೆಗಟ್ಟಬಹುದು ಎಂಬುವುದರ ಕುರಿತು ಎಲ್ಲರಿಗೂ ಅರಿವು ಹಾಗೂ ಎಚ್ಚರಿಕೆ ಇರಬೇಕು ಎಂಬ ಕಾರಣದಿಂದ ಅನಿಲ ಸೋರಿಕೆ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಪೈಪ್‌ಲೈನ್ ಹಾದುಹೋಗಿರುವಎಲ್ಲಗ್ರಾಮಗಳಲ್ಲಿಯೂ ಸಹ ನಿರಂತರವಾಗಿ ಅನಿಲ ಸೋರಿಕೆ ಅಣಕು ಪ್ರದರ್ಶನ ಹಮ್ಮಿಕೊಳ್ಳುವುದರಿಂದ ಅರಿವು ಮೂಡಿಸಬಹುದಾಗಿದೆ ಎಂದು ಅಭಿಪ್ರಾಯಪಟ್ಟರು.

ಪೆಟ್ರೋಲಿಯಂ ಉತ್ಪನ್ನಗಳ ಪೈಪ್‌ಲೈನ್, ವಾಟರ್ ಪೈಪ್‌ಲೈನ್ ಸೇರಿದಂತೆ ಯಾವುದೇ ಪೈಪ್‌ಲೈನ್‌ಗಳನ್ನು ನಿರ್ವಹಣೆ ಮಾಡಲು ಅಗ್ನಿಶಾಮಕ ವಾಹನ ಸಂಚಾರ, ಅಂಬುಲೆನ್ಸ್, ಭದ್ರತಾ ತಂಡಗಳ ಸಂಚಾರಕ್ಕೆ ಸರ್ವೀಸ್ ರಸ್ತೆಗಳನ್ನು ನಿರ್ಮಿಸಲಾಗುತ್ತದೆ. ಆದರೆ ಈ ಪೈಪ್‌ಲೈನ್‌ಗೆ ಎಲ್ಲಿಯೂ ಆ ತರಹದ ರಸ್ತೆ ಇಲ್ಲ. ತುರ್ತು ಅವಘಡಗಳು ಸಂಭವಿಸಿದಾಗ ತಕ್ಷಣ ಆ ಸ್ಥಳಕ್ಕೆ ತಲುಪಲು ಸಮೀಪದ ರಸ್ತೆ ಅವಲಂಬಿಸಬೇಕಾಗುತ್ತದೆ. ಆ ರಸ್ತೆಯ ಮೂಲಕ ಆಗಮಿಸಿ ಪರಿಸ್ಥಿತಿ ನಿಭಾಯಿಸಬೇಕಾಗುತ್ತದೆ. ಆದರೆ ಈ ಪೈಪ್‌ಲೈನ್‌ಗೆ ಜಿಯೋ ಪೆನ್ಸಿಂಗ್ ಇದ್ದು, ಇದರ ಮೂಲಕ ಯಾವ ಸ್ಥಳದಲ್ಲಿ ಪೈಪ್‌ಲೈನ್‌ಡ್ಯಾಮೇಜ್‌ಆಗಿದೆಎಂಬುದನ್ನು ನಿಖರವಾಗಿ ಪತ್ತೆಹಚ್ಚಬಹುದಾಗಿದೆ. ಆದಾಗ್ಯೂ ಮುನ್ನೆಚ್ಚರಿಕೆ ಕ್ರಮವಾಗಿ ತ್ವರಿತವಾಗಿ ಸ್ಪಂದಿಸುವ ನಿಟ್ಟಿನಲ್ಲಿ ರಸ್ತೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.



ಎಲ್‌ಪಿಜಿ ಪೈಪ್‌ಲೈನ್ ಹಾದು ಹೋಗಿರುವ ಎಲ್ಲ ಗ್ರಾಮಗಳಲ್ಲಿ, ಗ್ರಾಮ ಪಂಚಾಯಿತಿಗಳಲ್ಲಿಯೂ ಅನಿಲ ಸೋರಿಕೆ ತಡೆ ಸುರಕ್ಷತಾ ಅಭಿಯಾನಯನ್ನು ನಿರಂತರವಾಗಿ ಮಾಡಬೇಕು. ರೈತರು, ಸಾರ್ವಜನಿಕರು, ಮಕ್ಕಳು, ಸುತ್ತಮುತ್ತಲಿನ ಗ್ರಾಮಸ್ಥರಿಗೆ ಪೈಪ್‌ಲೈನ್ ಹಾದುಹೋಗಿರುವ ಮಾಹಿತಿ ತಿಳಿದಿರಬೇಕು. ಒಂದು ವೇಳೆ ಅನಿಲ ಸೋರಿಕೆಯಾದರೆ ಯಾವ ರೀತಿಯ ಅನಾಹುತ ಸಂಭವಿಸುತ್ತದೆ. ಅನಾಹುತ ಉಂಟಾದಾಗ ಯಾರಿಗೆ ಸಂಪರ್ಕಿಸಬೇಕು ಎಂಬ ಮಾಹಿತಿ ಅತ್ಯಗತ್ಯ. ಹಾಗಾಗಿ ದುರ್ಘಟನೆ ತಡೆಯಲು ಹಾಗೂ ತಕ್ಷಣ ಮಾಹಿತಿ ತಿಳಿಸಲು ಸಹಾಯವಾಣಿ ಸಂಖ್ಯೆಯ ಮಾಹಿತಿ ಎಲ್ಲರೂ ತಿಳಿದಿರಬೇಕು ಎಂದು ಹೇಳಿದರು.

ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್‌ನ ಚೀಪ್ ಸ್ಟೇಷನ್ ಮ್ಯಾನೇಜರ್ ಅಭಿಷೇಕ್ ಮಾತನಾಡಿ, ಮಂಗಳೂರು-ಹಾಸನ-ಮೈಸೂರು-ಬೆಂಗಳೂರು-ಚೆರ್ಲಪಲ್ಲಿ ಎಲ್‌ಪಿಜಿ ಪೈಪ್‌ಲೈನ್ ಭಾರತ ಸರ್ಕಾರದ ಅಧೀನ ಸಂಸ್ಥೆಯಾದ ಹಿಂದುಸ್ತಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್‌ನ ಕಂಪನಿಯವರು ನಿರ್ವಹಿಸಿ ನಿರ್ವಹಿಸುತ್ತಿರುವ ಮಹತ್ವಪೂರ್ಣ ರಾಷ್ಟ್ರೀಯ ಯೋಜನೆ. ಈ ಪೈಪ್‌ಲೈನ್ ಮಂಗಳೂರಿನಿಂದ ಎಲ್‌ಪಿಜಿಯನ್ನು ರವಾನೆ ಮಾಡುತ್ತಾ ಹಾಸನದ ಮೂಲಕ ಯಡಿಯೂರು ಹಾಗೂ ಮೈಸೂರು, ಚೆರ್ಲಪಲ್ಲಿಯಲ್ಲಿ ಅಂತ್ಯಗೊಳ್ಳುತ್ತದೆ. ಈ ಪೈಪ್‌ಲೈನ್ ಉದ್ದೇಶವು ಕರ್ನಾಟಕ ಮತ್ತು ನೆರೆಯ ರಾಜ್ಯಗಳ ಬೆಳೆಯುತ್ತಿರುವ ಎಲ್‌ಪಿಜಿ ಬೇಡಿಕೆ ಪೂರೈಸುವುದಲ್ಲದೇ ಪಶ್ಚಿಮ ಘಟ್ಟ ಮತ್ತು ಮಂಗಳೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ಸಂಚಾರ ವ್ಯವಸ್ಥೆಯನ್ನೂ ಸುಗಮಗೊಳಿಸುತ್ತದೆ ಎಂದರು.

ಪೈಪ್‌ಲೈನ್‌ಗಳು ಅತ್ಯಂತ ನುರಿತ ಮತ್ತು ಅನುಭವಿ ಸಂಸ್ಥೆಗಳಿಂದ ನಿರ್ಮಿಸಿದ್ದು, ಅತ್ಯಂತ ಸುರಕ್ಷಾ ಮತ್ತು ಪರಿಸರಸ್ನೇಹಿ ಸಾಗಾಣಿಕಾ ಮಾರ್ಗವಾಗಿದೆ. ಆದರೆ ಕೆಲವು ಬಾರಿ ಸಮಾಜ ವಿರೋಧಿಗಳು ಪೈಪ್‌ಲೈಬ್‌ನಿಂದ ಎಲ್‌ಪಿಜಿಯನ್ನು ಕಳವು, ಹಾನಿ, ಯಾವುದೇ ವಿಧ್ವಂಸಕ ಕೃತ್ಯ ಎಸಗಲು ಪ್ರಯತ್ನಿಸಿದಾಗ ಇಂತಹ ಸಮಾಜಘಾತಕ ಪ್ರಯತ್ನಗಳಿಂದ ರಾಷ್ಟ್ರೀಯ, ಸಾರ್ವಜನಿಕ ಆಸ್ತಿಗಳು ತೊಂದರೆಗೆ ಸಿಲುಕುತ್ತವೆ. ಇವುಗಳನ್ನು ಗಮನದಲ್ಲಿಟ್ಟುಕೊಂಡು ಎಲ್‌ಪಿಜಿ ಪೈಪ್‌ಲೈನ್ ಹಾದು ಹೋಗುವ ಎಲ್ಲಾ ಗ್ರಾಮಗಳಲ್ಲಿಯೂ ಸುರಕ್ಷತಾ ಅರಿವು ಮೂಡಿಸುವ ಕಾರ್ಯಕ್ರಮ ಕೈಗೊಳ್ಳಲಾಗಿದೆ. ಗ್ರಾಮ ಪಂಚಾಯಿತಿನೊಂದಿಗೆ ಕೈಜೋಡಿಸುತ್ತಾ ಜನರಿಗೆ ಪೈಪ್‌ಲೈನ್‌ನ ಸುರಕ್ಷತೆ ಮತ್ತು ಭದ್ರತೆಯ ಅರಿವು ಮೂಡಿಸುವುದು ಈ ಸುರಕ್ಷಾ ಅಭಿಯಾನದ ಉದ್ದೇಶ ಎಂದು ಹೇಳಿದರು.

ಮಂಗಳೂರು-ಹಾಸನ-ಮೈಸೂರು-ಬೆಂಗಳೂರು-ಚೆರ್ಲಪಲ್ಲಿ ಅನಿಲ ಸೋರಿಕೆ ಉಂಟಾದ ಸಂದರ್ಭದಲ್ಲಿ ಟೋಲ್ ಫ್ರೀ ಸಂಖ್ಯೆ 18001801276 ಹಾಗೂ ಮಂಗಳೂರು ನಿಯಂತ್ರಣ ಕೊಠಡಿ ಮೊಬೈಲ್ ನಂ 8861986057 ಗೆ ಸಂಪರ್ಕಿಸಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಹಿರಿಯೂರು ತಹಶೀಲ್ದಾರ್ ರಾಜೇಶ್ ಕುಮಾರ್, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸತೀಶ್, ಪೌರಾಯುಕ್ತ ವಾಸೀಂ, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಸೋಮಶೇಖರ್ ವಿ ಅಗಡಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಪೊಲೀಸ್ ಇನ್ಸ್‌ಪೆಕ್ಟರ್ ಕಾಳಿಕೃಷ್ಣ, ಜಿಲ್ಲಾ ವಿಪತ್ತು ನಿರ್ವಹಣಾ ಪರಿಣಿತ ಹೆಚ್. ಎನ್.ಸಮರ್ಥ್, ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್‌ನ ಚೀಪ್ ಸ್ಟೇಷನ್ ಮ್ಯಾನೇಜರ್ ಅಭಿಷೇಕ್, ಭದ್ರತಾ ಅಧಿಕಾರಿ ಟಿ.ಎಂ.ಶಿವಕುಮಾರ್ ಇದ್ದರು.

## 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ನಿವೃತ್ತ ನೌಕರರಿಗೆ ವೇತನ ನೀಡಲು ಸರ್ಕಾರದ ನಿರ್ಲಕ್ಷ್ಯ : ಖಂಡನೆ

**ಚಳ್ಳಕೆರೆ:** 2022-24ರ ಅವಧಿಯಲ್ಲಿ ರಾಜ್ಯದಲ್ಲಿ 26 ಸಾವಿರ ನೌಕರರ ನಿವೃತ್ತರಾಗಿದ್ದು, ಅವರಿಗೆ ಇದುವರೆಗೂ ಸೂಕ್ತ ರೀತಿಯಲ್ಲಿ ಸರ್ಕಾರ ಸ್ಪಂದಿಸುತ್ತಿಲ್ಲ. ಬರುವ ರಾಜ್ಯದ ಬಜೆಟ್ ಅಧಿವೇಶನದಲ್ಲಿ ನಿವೃತ್ತನೌಕರರ ವೇದಿಕೆಯ ಬೇಡಿಕೆಯನ್ನು ಈಡೇರಿಸಲು ನಿರ್ಲಕ್ಷ್ಯೆ ವಹಿಸಿದರೆ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಲಾಗುವುದು ಎಂದು ರಾಜ್ಯ ನಿವೃತ್ತನೌಕರರ ವೇದಿಕೆಯ ರಾಜ್ಯಸಂಚಾಲಕ ಗೋವಿಂದಪ್ಪ ಎಚ್ಚರಿಸಿದರು. ಅವರು, ಮಂಗಳವಾರ ಸರ್ಕಾರಿ ನೌಕರರ ಭವನದಲ್ಲಿ ತಾಲ್ಲೂಕು ನಿವೃತ್ತ ನೌಕರರ ವೇದಿಕೆ ಹಮ್ಮಿಕೊಂಡಿದ್ದ ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಕಳೆದ ಹಲವಾರು 24ತಿಂಗಳಿನಿಂದ ನಿವೃತ್ತ ನೌಕರರ ವೇದಿಕೆ ಸರ್ಕಾರ ನಿರಂತರ ಮನವಿ ಮಾಡುತ್ತಿದ್ದರೂ ಯಾವುದೇ ಕ್ರಮವನ್ನು ಸರ್ಕಾರ ಅನುಸರಿಸುತ್ತಿಲ್ಲ. ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ಸರ್ಕಾರದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ 7ನೇ ವೇತನ ಆಯೋಗವನ್ನು ಜಾರಿಗೆ ತಂದಿದ್ದರೂ ಅದರ ಪ್ರತಿಫಲವನ್ನು ನಿವೃತ್ತ ಸರ್ಕಾರಿ ನೌಕರರಿಗೆ ವಿತರಣೆ ಮಾಡುವಲ್ಲಿ ವಿಳಂಬ ಧೋರಣೆ ಅನುರಿಸಿರುತ್ತಿದ್ದು, ನಿವೃತ್ತ ನೌಕರರಬಗ್ಗೆ ಉದಾಸೀನತೆ ತೋರುವುದು ಸರಿಯಲ್ಲ ಎಂದರು. ಜಿಲ್ಲಾ ಸಂಚಾಲಕ ಡಿ.ಟಿ.ಜಗನ್ನಾಥ ಮಾತನಾಡಿ, ಕಳೆದ 2022-24ರ ಅವಧಿಯಲ್ಲಿ ಚಿತ್ರದುರ್ಗ ಜಿಲ್ಲೆಯೂ ಸೇರಿದಂತೆ ರಾಜ್ಯದಾದ್ಯಂತ ನಿವೃತ್ತರಾದ ನೌಕರರು 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ನಿವೃತ್ತಿ ವೇತನ ಪಡೆಯಲು ಹರಸಾಹಸ ಪಡೆಬೇಕಾಗಿದೆ.



## ಪ್ರಮುಖ ಸುದ್ದಿ

ಯುವಜನತೆಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಸಲಹೆ

# ಯುವ ಸಮೂಹ ದೇಶದ ಶಕ್ತಿ, ಸರ್ಕಾರದ ನೀತಿ ನಿರೂಪಣೆ ಬಗ್ಗೆ ವಿಮರ್ಶಾತ್ಮಕ ದೃಷ್ಟಿಕೋನ ಬೆಳಿಸಿಕೊಳ್ಳಿ

» ದಾವಣಗೆರೆ

ಯುವ ಜನತೆ ದೇಶದ ಶಕ್ತಿ, ದೇಶದ ಭವಿಷ್ಯ ಯುವಕರ ಕೈಯಲಿದೆ. ಚುನಾವಣೆಯಲ್ಲಿ ಒಮ್ಮೆ ಓಟು ಮಾಡಿದರೆ ಸಾಲದು, ಐದು ವರ್ಷ ಸರ್ಕಾರರೂಪಿಸುವನೀತಿನಿರೂಪಣೆ ಹಾಗೂ ಜನಪ್ರತಿನಿಧಿಗಳ ಕಾರ್ಯಗಳನ್ನು ವಿಮರ್ಶಾತ್ಮಕವಾಗಿ ಅವಲೋಕಿಸುವ ದೃಷ್ಟಿಕೋನ ಬೆಳಸಿಕೊಳ್ಳಬೇಕು ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ದಾವಣಗೆರೆ ಬಿ.ಐ.ಇ.ಟಿ ಕಾಲೇಜಿನ ಎಸ್.ಎಸ್.ಎಂ ಸಾಂಸ್ಕೃತಿಕ ಸಭಾಂಗಣದಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಯುವಜನೋತ್ಸವದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.ಸಂವಿಧಾನ ನಮಗೆ ಹಕ್ಕು ನೀಡಿದೆ. ಬರೀ ಹಕ್ಕುಗಳ ಬಗ್ಗೆ ತಿಳಿದುಕೊಂಡರೆ ಸಾಲದು, ಕರ್ತವ್ಯಗಳನ್ನು ಸಹ ಯುವಕರು ತಿಳಿದುಕೊಳ್ಳಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರದ ನೀತಿ ನಿರೂಪಣೆಯನ್ನು ವಿಮರ್ಶಾತ್ಮಕವಾಗಿ ನೋಡಬೇಕು. ಈ ಹಿನ್ನಲೆಯಲ್ಲಿ ದೇಶದ ಸಂವಿಧಾನವನ್ನು ಪರಿಚಯಿಸುವ ದೃಷ್ಟಿಯಿಂದ ವಿಜಅ (ವಿಟಿಂತಿ ಥಿಂಣಡಿ ಥಿಂಟಣುಣಣುಂಟಿ) ಎನ್ನುವ ವಿನೂತನ ಕಾರ್ಯಕ್ರಮಕ್ಕೆ ಚಾಲನೆ ನೀಡಿಲಾಗಿದೆ ಎಂದರು. ಯುವಜನತೆ ವೈಯಕ್ತಿಕ, ಕೌಟುಂಬಿಕ ಹಾಗೂ ಸಾಮಾಜಿಕ ಜವಾಬ್ದಾರಿ ಅರಿತು ನಡೆಯಬೇಕು. ಆರೋಗ್ಯದ ಕಡೆ ಹೆಚ್ಚು ಗಮನ ಹರಿಸಿ, ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು. ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. ಯುವಜನೋತ್ಸವದಯಶಸ್ವಿಗಾಗಿಶ್ರಮಿಸಿದ ಅಧಿಕಾರಿಗಳು ಹಾಗೂ ಸ್ವಯಂ ಸೇವಕರಿಗೆ ಧನ್ಯವಾದ ತಿಳಿಸಿದರು.ಶಾಸಕ ಬಸವಂತಪ್ಪ ಮಾತನಾಡಿ, ಯುವಜನೋತ್ಸವದಲ್ಲಿ ವಿಜೇತರಾದ ಕಲಾ ತಂಡಗಳಿಗೆ ರೂ. 1 ಲಕ್ಷ ಬಹುಮಾನ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡುತ್ತೇನೆ. ಈ ವಿಚಾರವಾಗಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.



ಶಾಸಕ ಬಿ.ಪಿ.ಹರೀಶ್, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್, ಮಾತನಾಡಿದರು. ಯುವಜನೋತ್ಸವದಲ್ಲಿ ಪಾಲ್ಗೊಂಡ ವಿವಿಧ ಜಿಲ್ಲೆಯ ವಿದ್ಯಾರ್ಥಿಗಳು ಕಾರ್ಯಕ್ರಮ ಆಯೋಜನೆಗೆ ಮೆಚ್ಚುಗೆ ವ್ಯಕ್ತಪಡಿಸಿ ಮಾತನಾಡಿದರು. ಯುವ ಪುರಸ್ಕೃತರಿಗೆ ಸಮಾರೋಪ ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ರಾಜ್ಯಮಟ್ಟದ ಯುವಜನೋತ್ಸವದ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ಹಾಗೂ ಪ್ರಶಸ್ತಿಗಳನ್ನು ನೀಡಲಾಯಿತು.

ರಾಜ್ಯ ಮಕ್ಕಳ ಆಯೋಗದ ಅಧ್ಯಕ್ಷ ಕೆ.ನಾಗನಗೌಡ, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ, ಜಿ.ಪಂ.ಸಿಇಓ ಸುರೇಶ್ ಬಿ. ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜನಪದ ಗೀತಗಾಯಕ ಅಪ್ಪಿಗೆರೆ ತಿಮ್ಮರಾಜು ಉಪಸ್ಥಿತಿದ್ದರು. ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ರೇಣುಕಾ ಸ್ವಾಗತಿಸಿದರು.

ತಾಂಜಾವೂರಿನ ದಕ್ಷಿಣ ಸಾಂಸ್ಕೃತಿಕ ಕೇಂದ್ರದಿಂದ ಆಗಮಿಸಿದ ಕಲಾವಿದರು ದಕ್ಷಿಣ ಭಾಗದ ಕೇರಳದ ಮಾರಿಥ್ಯೆಯಂ ನೃತ್ಯ ಪ್ರದರ್ಶಿಸಿದರು. ಪಂಜಾಬ್ ರಾಜ್ಯದಿಂದ ಆಗಮಿಸಿದ ತಂಡ ಪ್ರಸಿದ್ಧ ಬಾಂಗ್ಡ ಹಾಗೂ ಮಹಾರಾಷ್ಟ್ರದ ಮುಂಬೈನಿಂದ ಆಗಮಸಿದ ಮರಾಠಿ ತಂಡ ಲಾವಣಿ ನೃತ್ಯದ ಮೂಲಕ ಜನಮನ ಸೂರೆಗೊಳಿಸಿದರು. ಮಧ್ಯಪ್ರದೇಶದ ಬದಾಯಿ ಹಾಗೂ ದಾವಣಗೆರೆ ಕಲಾ ತಂಡ ಕಂಸಾಳೆ ನೃತ್ಯ ಪ್ರದರ್ಶಿಸಿದರು.

## ಫಾಸ್ಟ್ ನ್ಯೂಸ್

### ಮತದಾರರ ಪಟ್ಟಿ ಪ್ರಕಟ



» **ದಾವಣಗೆರೆ**

ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ಕರಡು ಮತದಾರರ ಪಟ್ಟಿ ಪರಿಷ್ಕರಣೆ ಮಾಡಿ ಅಂತಿಮ ಮತದಾರರ ಪಟ್ಟಿಯನ್ನು ಮತಗಟ್ಟೆ ವಾರು ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಜಿ.ಎಂ. ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರ ಸೇರಿ 1693 ಮತಗಟ್ಟೆಗಳಿವೆ. ಈ ಎಲ್ಲಾ ಮತಗಟ್ಟೆಗಳಲ್ಲಿ 743888 ಪುರುಷ, 752813 ಮಹಿಳಾ ಹಾಗೂ 118 ಇತರೆ ಮತದಾರರು ಸೇರಿ 1496819 ಮತದಾರರಿದ್ದಾರೆ.

**ಕ್ಷೇತ್ರವಾರು ಮತಗಟ್ಟೆ ವಿವರ:** ಜಗಳೂರು 263, ಹರಿಹರ 228, ದಾವಣಗೆರೆ ಉತ್ತರ ಕ್ಷೇತ್ರ 245, ದಾವಣಗೆರೆ ದಕ್ಷಿಣ ಕ್ಷೇತ್ರ 217, ಮಾಯಕೊಂಡ ಕ್ಷೇತ್ರ 240, ಚನ್ನಗಿರಿ ಕ್ಷೇತ್ರ 255 ಹಾಗೂ ಹೊನ್ನಾಳಿ ಕ್ಷೇತ್ರದಲ್ಲಿ 245 ಮತಗಟ್ಟೆ ಸೇರಿ 1693 ಮತಗಟ್ಟೆಗಳಿವೆ.

**ಮತದಾರರ ವಿವರ :** ಜಗಳೂರು, ಪುರುಷ–100634, ಮಹಿಳೆ–99534, ಇತರೆ–10, ಒಟ್ಟು–200178, ಹರಿಹರ, ಪುರುಷ–, ಮಹಿಳೆ–106767, ಇತರೆ–17, ಒಟ್ಟು–212327, ದಾವಣಗೆರೆ ಉತ್ತರ ಪುರುಷ–125964, ಮಹಿಳೆ–130652, ಇತರೆ–36, ಒಟ್ಟು–256652,ದಾವಣಗೆರೆ ದಕ್ಷಿಣ, ಪುರುಷ–111266, ಮಹಿಳೆ–114395, ಇತರೆ–38, ಒಟ್ಟು–225699, ಮಾಯಕೊಂಡ, ಪುರುಷ–98063, ಮಹಿಳೆ–97794, ಇತರೆ–4, ಒಟ್ಟು–195861, ಚನ್ನಗಿರಿ ಪುರುಷ–102105, ಮಹಿಳೆ–103051, ಇತರೆ–8, ಒಟ್ಟು–205164,ಹೊನ್ನಾಳಿ ಪುರುಷ–100307, ಮಹಿಳೆ–100626, ಇತರೆ–5, ಒಟ್ಟು–200938 ಮತದಾರರಿದ್ದಾರೆ.

ಅಂತಿಮ ಮತದಾರರ ಪಟ್ಟಿಯನ್ನು ತಾಲ್ಲೂಕು ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆಯಲ್ಲಿ ಪ್ರಕಟಿಸಲಾಗಿದೆ.

ಆ▯▯ಲೈನ್ https://voterportal.eci.gov.in ಮತ್ತು https://voters.eci.gov.in ನಲ್ಲಿ ಪರಿಶೀಲಿಸಿಕೊಳ್ಳಬಹುದು. ಮತ್ತು ಮತದಾರ ಪಟ್ಟಿಗೆ ಸೇರ್ಪಡೆ, ತಿದ್ದುಪಡಿ, ವರ್ಗಾವಣೆ ನಿರಂತರ ಪ್ರಕ್ರಿಯೆ ಯಾಗಿರುತ್ತದೆ. ವಿದೇಶಗಳಲ್ಲಿ ಉದ್ಯೋಗ, ಶಿಕ್ಷಣ ನಿಮಿತ್ತ ನೆಲೆಸಿರುವ ಭಾರತೀಯ ಪ್ರಜೆಗಳಿಗೆ ಮತದಾರರ ಪಟ್ಟಿಯಲ್ಲಿ ಹೆಸರನ್ನು ನೋಂದಾಯಿಸಲು ಅವಕಾಶ ಕಲ್ಪಿಸಲಾಗಿದೆ. ನಮೂನೆ–6 ರಲ್ಲಿ ಅರ್ಜಿಯನ್ನು ಅಗತ್ಯ ದಾಖಲೆಯೊಂದಿಗೆ ಸಂಬಂಧಿಸಿದ ಮತದಾರರ ನೋಂದಾಧಿಕಾರಿಗಳಿಗೆ ಅಂಚೆ ಅಥವಾ ಆನ್‌ಲೈನ್ ಮೂಲಕ ಸಲ್ಲಿಸಿ ಹೆಸರು ನೋಂದಾಯಿಸಿಕೊಳ್ಳಬಹುದು.

### ಪರಿಷತ್ ಸಮ್ಮೇಳನ: ಚಿತ್ರದುರ್ಗದ ಮೂರು ಜನರಿಗೆ ಪ್ರಶಸ್ತಿ ಪ್ರಧಾನ

» **ಚಿತ್ರದುರ್ಗ**

ಬೆಂಗಳೂರಿನ ಗ್ರಾಮಾಂತರ ಜಿಲ್ಲೆಯ ಬಾಗಲೂರಿನಲ್ಲಿ ಜ.3 ಮತ್ತು 4 ರಂದು ನಡೆದ 4ನೇ ರಾಜ್ಯ ಮಟ್ಟದ ವೈಜ್ಞಾನಿಕ ಪರಿಷತ್ ಸಮ್ಮೇಳನದಲ್ಲಿ ಚಿತ್ರದುರ್ಗದ ಮೂರು ಜನರಿಗೆ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಲಾಯಿತೆಂದು ವೈಜ್ಞಾನಿಕ ಪರಿಷತ್‌ನ ಜಿಲ್ಲಾಧ್ಯಕ್ಷರಾದ ನಾಗರಾಜ್ ಸಂಗಮ್ ತಿಳಿಸಿದ್ದಾರೆ. ಕರೋನ ಸಮಯದಲ್ಲಿ ಉತ್ತಮವಾದ ಸೇವೆಯನ್ನು ಮಾಡಿದ ಬಸವೇಶ್ವರ ಕಾಲೇಜು ಮತ್ತು ಆಸ್ಪತ್ರೆಯ ಅಧೀಕ್ಷಕರಾದ ಪಾಲಾಕ್ಷರವರಿಗೆ ಎಚ್.ಎನ್‌ಪ್ರಶಸ್ತಿಗೆ, ಈ ವರ್ಷದಿಂದ ಹೊಸದಾಗಿ ಪ್ರಾರಂಭ ಮಾಡಲಾದ ಚೈತನ್ಯಶ್ರೀ ಪ್ರಶಸ್ತಿಗೆ ಚಿತ್ರದುರ್ಗದ ವಿಶ್ವ ಮಾನವ ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಸುಧಾ ಲೋಕೇಶ್ ಹಾಗೂ ಸರ್ಕಾರಿ ಶಿಕ್ಷಕರಾದ ಶ್ರೀಮತಿ ಶೋಭಾ ಮಲ್ಲಿಕಾರ್ಜನ್‌ರವರನ್ನು ಆಯ್ಕೆ ಮಾಡಿ ಸನ್ಮಾನಿಸಲಾಯಿತು. ಕಳೆದ ಮೂರು ವರ್ಷದಿಂದ ಎಚ್.ಎನ್. ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, ಇದರಲ್ಲಿ ಚಿತ್ರದುರ್ಗದ ಕೊಳಗೇರಿ ನಿರ್ಮೂಲನಾ ಸಂಸ್ಥೆಯ ಗಣೇಶ್, ಪರಿಸರವಾದಿ ಎಚ್.ಎಸ್.ಎನ್. ಸ್ವಾಮಿ ಹಾಗೂ ವಿಜ್ಞಾನ ಶಿಕ್ಷಕರಾದ ಡಾ.ವಿ.ಮೋಹನ್ ಕುಮಾರ್ ಪವಾಡ ಗುಟ್ಟುಗಳನ್ನು ಬಯಲು ಮಾಡುವ ಹಿನ್ನಲೆಯಲ್ಲಿ ಇವರಿಗೆ ನೀಡಲಾಗಿತ್ತು. ಪ್ರಶಸ್ತಿಗಳನ್ನು ಸಮ್ಮೇಳನಾಧ್ಯಕ್ಷರಾದ ಶ್ರೀಮತಿ ಉಮಾಶ್ರೀ, ಇಸ್ರೋದ ಮಾಜಿ ಅಧ್ಯಕ್ಷರಾದ ಕಿರಣ್ ಕುಮಾರ್ ಹಾಗೂ ವೈಜ್ಞಾನಿಕ ಪರಿಷತ್‌ನ ಸಂಸ್ಥಾಪಕರಾದ ಹುಲಿಕಲು ನಟರಾಜ್ ಪ್ರಧಾನ ಮಾಡಿದರು. ಇದೇ ಸಂದರ್ಭದಲ್ಲಿ ಉತ್ತಮ ಸೇವಾ ಪ್ರಶಸ್ತಿಯನ್ನು ಚಿತ್ರದುರ್ಗ ಜಿಲ್ಲಾಧ್ಯಕ್ಷರಾದ ನಾಗರಾಜ್ ಸಂಗಮ್ ರವರಿಗೆ ನೀಡಲಾಯಿತು.

### ಮುಕ್ತ ರಾಜ್ಯಮಟ್ಟದ ಟೈಕ್ವಾಂಡೊ ಪಂದ್ಯಾವಳಿ; ಪಾರ್ಥ ಎಸ್.ನಾಯ್ಕ್‌ಗೆ ಬಂಗಾರ ಪದಕ

» **ಚಿತ್ರದುರ್ಗ**

ಹೊಸದುರ್ಗ ತಾಲೂಕಿನಲ್ಲಿ ಜ.5ರಂದು ಆಯೋಜಿಸಿದ್ದ ಸಾಯಿ ಕಪ್ 2025ರ ಮುಕ್ತ ರಾಜ್ಯ ಮಟ್ಟದ ಟೈಕ್ವಾಂಡೊ ಪಂದ್ಯಾವಳಿಯಲ್ಲಿ 08 ವರ್ಷದ ಒಳಗಿನ ಕೂರ್ಗಿ ಫೈಟ್ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ಡಾ.ಸಂತೋಷ ನಾಯ್ಕ್ ಮತ್ತು ಸುರೇಖ ದಂಪತಿಗಳ ಮಗನಾದ ಪಾರ್ಥಎಸ್,ನಾಯ್ಕ್ ಬಂಗಾರದ ಪದಕವನ್ನು ಪಡೆದಿದ್ದಾರೆ.

# ದಾವಣಗೆರೆ: ಯುವಜನೋತ್ಸಕ್ಕೆ ವೈಭವದ ತೆರೆ

» **ದಾವಣಗೆರೆ**



ಎರಡು ದಿನಗಳ ಕಾಲ ದಾವಣಗೆರೆ ನಗರದಲ್ಲಿ ಯುವ ಜನರ ಕಲರವಕ್ಕೆ ಸಾಕ್ಷಿಯಾಗಿದ್ದ ರಾಜ್ಯ ಮಟ್ಟದ ಯುವನಜೋತ್ಸವಕ್ಕೆ ತೆರೆ ಬಿದ್ದಿದೆ. 2 ದಶಕಗಳ ತರುವಾಯ ದಾವಣಗೆರೆ ನಗರಕ್ಕೆ ಯುವಜನೋತ್ಸವ ಏರ್ಪಡಿಸುವ ಸುವರ್ಣ ಅವಕಾಶ ಲಭಿಸಿತ್ತು.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಹಾಗೂ ಸಂಸದೆ ಪ್ರಭಾ ಮಲ್ಲಿಕಾರ್ಜುನ ಸೇರಿದಂತೆ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು, ಅಧಿಕಾರಿಗಳು ಯುವಜನೋತ್ಸವ ಆಯೋಜನೆಗೆ ಸಂಕಲ್ಪ ತೊಟ್ಟು ಕಾರ್ಯಕ್ರಮ ಸ್ಮರಣೀಯವಾಗಿಸಿದ್ದಾರೆ.

ಯುವಜನೋತ್ಸವವನ್ನು ಪ್ರತಿಯೊಬ್ಬರು ಸಹ ತಮ್ಮ ಮನೆಯ ಕಾರ್ಯಕ್ರಮ ಎನುವಂತೆ ಭಾವಿಸಿ, ಸೀಮಿತ ಆರ್ಥಿಕ ಸಂಪನ್ಮೂಲ ಹಾಗೂ ಅನುದಾನದ ನಡುವೆಯೂ ವಿಜೃಂಭಣೆಯಿಂದ ನಡೆಯಲು ಕಾರಣಕರ್ತರಾಗಿದ್ದಾರೆ. ವೇದಿಕೆ, ಊಟ, ವಸತಿ ಹಾಗೂ ಆತಿಥ್ಯಕ್ಕೆ ಎಲ್ಲಿಯೂ ಚ್ಯುತಿ ಬರದ ಹಾಗೆ ಕಾರ್ಯ ನಿರ್ವಹಿಸಿದ್ದಾರೆ. ಕಾರ್ಯಕ್ರಮದ ಯಶಸ್ವಿಗಾಗಿ ವಿವಿಧ ಸಮಿತಿಗಳನ್ನು ರಚಿಸಿ ಅಧಿಕಾರ ಹಾಗೂ ಕಾರ್ಯನಿರ್ವಹಣೆ ಹೊಣೆ ಒದಗಿಸಲಾಗಿತ್ತು.ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರು ಈ ಹಿಂದೆ ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರಾಗಿ ಎರಡು ದಶಕಗಳ ಹಿಂದೆ ದಾವಣಗೆರೆ ನಗರಿಯಲ್ಲಿ ರಾಜ್ಯ ಮಟ್ಟದ ಯುವಜನೋತ್ಸವ ಆಯೋಜಿಸಿದ್ದರು. ಮತ್ತೊಮ್ಮೆ ದಾವಣಗೆರೆ ನಗರಕ್ಕೆ ಯುವಜನೋತ್ಸವ ಆಯೋಜಿಸುವ ಅವಕಾಶ ಒದಗಿ ಬಂದಿದೆ ಎಂದು ತಿಳಿದ ತಕ್ಷಣ ಅವರೊಳಗಿನ ಯುವ ಮನಸ್ಸು ರೋಮಾಂಚನಗೊಂಡಿತ್ತು.

ಇವರಿಗೆ ಸಾಥಿಯಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಸಹ ಯುವಜನೋತ್ಸವ ಆಯೋಜನೆಯ ಹೊಣೆ ಹೊತ್ತರು. ಇವರ ಆಶಯಕ್ಕೆ ಜೊತೆಯಾಗಿ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಜನಪ್ರತಿನಿಧಿಗಳು ಒತ್ತಾಸೆಯಾದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಾರ್ಯದರ್ಶಿ ರಂದೀಪ್.ಡಿ,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯುಕ್ತ ಚೇತನ್ ರಾಜ್ಯ ಮಟ್ಟದ ಯುವಜನೋತ್ಸವ ಆಯೋಜನೆಗೆ ಸರ್ಕಾರದ ಎಲ್ಲ ನೆರವಿನ ಹಸ್ತ ಚಾಚಿದರು.

ಯುವಜನೋತ್ಸವ ಆಯೋಜನೆಯ ಕ್ರಿಯಾಶಕ್ತಿಯಾಗಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಹಗಲಿರುಳು ಕಾರ್ಯನಿರ್ವಹಿಸಿದರು. ನಾವಿಕನಾಗಿ ಪ್ರತಿಯೊಂದು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಮೂಡಿಬರಲು ಕಾರಣರಾದರು. ಇವರೊಂದಿಗೆ ಜಿ.ಪಂ.ಸಿಇಓ ಡಾ.ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ ಸಹ ಶ್ರಮಿಸಿದರು. ಇದರೊಂದಿಗೆ ಎಲ್ಲ ಇಲಾಖೆಗಳ ಅಧಿಕಾರಿ, ಸಿಬ್ಬಂದಿ ಸಹ ಪ್ರಾಮಾಣಿಕವಾಗಿ ಯುವಜನೋತ್ಸವ ಯಶಸ್ವಿಗೆ ದುಡಿದಿದ್ದಾರೆ.ನಗರದ ಬಾಪೂಜಿ ಬಾಪೂಜಿ ಎ.ಬಿ.ಎ ಮೈದಾನದಲ್ಲಿ ಆಯೋಜಸಿದ್ದ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ರಾಜ್ಯ ಮಟ್ಟದ ಯುವಜನೋತ್ಸವಕ್ಕೆ ಚಾಲನೆ ನೀಡಿದರು. ನಂತರ 7 ಸಮಾನಂತರ ವೇದಿಕೆಯಲ್ಲಿ ರಾಜ್ಯದ ಬೀದರ್ ನಿಂದ ಚಾಮರಾಜನಗರ, ಉಡುಪಿಯಿಂದ ಕೋಲಾರದವರೆಗಿನ 31 ಜಿಲ್ಲೆಗಳಿಂದ ಆಗಮಿಸಿದ ಯುವ ಪ್ರತಿಭೆಗಳು ತಮ್ಮ ಕಲೆಗಳನ್ನು ಅನಾವರಣಗೊಳಿಸಿದರು.

ಘೋಷಣಾ ಸ್ಪರ್ಧೆ, ಕವನ ರಚನೆ, ಚಿತ್ರಕಲೆ, ಕಥೆ ಬರವಣಿಗೆ, ವಿಜ್ಞಾನ ಮೇಳ, ಜನಪದ ಗೀತೆ ಹಾಗೂ ಜನಪದ ನೃತ್ಯ ಪ್ರಕಾರಗಳ ಸ್ಪರ್ಧೆಗಳು ನಡೆದವು. ಇಲ್ಲಿ ವಿಜೇತರಾದವರು ರಾಷ್ಟ್ರ ಮಟ್ಟದ ಯುವಜನೊತ್ಸವದಲ್ಲಿ ಪಾಲ್ಗೊಳ್ಳುವರು.

ರಾಜ್ಯ ಮಟ್ಟದ ಯುವಜನೋತ್ಸವದ ಅಂಗವಾಗಿ ಆಯೋಜಿಸಿದ್ದ ವಾಕಥಾನ್ ಹಾಗೂ ರಾಫ್ಟಿಂಗ್ ಹಾಗೂ ಕಾಯ್ಕಿಂಗ್ (ಹಾಯಿದೋಣಿ) ಕ್ರೀಡೆಗಳು ನಗರದ ಜನತೆ ವಿನೂತನ ಅನುಭವ ನೀಡಿದವು. ಮಣಿಕಾಂತ್ ಕದ್ರಿ ಸಂಗೀತ ಸಂಜೆ ಕಾರ್ಯಕ್ರಮ ಜನರ ಮನರಂಜಿಸಿತು. ಯುವಜನೋತ್ಸವದಲ್ಲಿ ಆಗಮಿಸಿದ ಸ್ಪರ್ಧಿಗಳು ಹಾಗೂ ಗಣ್ಯ ಮಾನ್ಯರು ದಾವಣಗೆರೆ ನಗರದ ಅತಿಥ್ಯಕ್ಕೆ ಮನಸೋತರು. ಸಾರಿಗೆ, ವಸತಿ, ಊಟ ಎಲ್ಲದರಲ್ಲೂ ಅಚ್ಚುಕಟ್ಟುತನ ಕಂಡುಬಂದಿತು. ಪೊಲೀಸ್ ಇಲಾಖೆಯಿಂದ ಕಾರ್ಯಕ್ರಮ ಭದ್ರತೆಗಾಗಿ 1500 ಪೊಲೀಸರನ್ನು ನೇಮಿಸಲಾಗಿತ್ತು.

# ಕೀಟನಾಶಕಗಳ ಬಳಕೆಯಲ್ಲಿ ಮುಂಜಾಗ್ರತೆ ಅಗತ್ಯ

» **ಚಿತ್ರದುರ್ಗ**



ಕೀಟನಾಶಕಗಳ ಬಳಕೆಯಲ್ಲಿ ರೈತರು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳದಿದ್ದರೆ, ಕೃಷಿ ಪೂರಕ ಸೂಕ್ಷ್ಮ ಜೀವಿಗಳ ಅಲಭ್ಯತೆ ರೈತರನ್ನು ಕಾಡಲಿದೆ. ಈ ಕುರಿತಂತೆ ಕೃಷಿ ಮತ್ತು ತೋಟಗಾರಿಕೆ ಅಧ್ಯಯನದ ವಿದ್ಯಾರ್ಥಿಗಳು ರೈತರಿಗೆ ತರಬೇತಿ ಮೂಲಕ ಮನವರಿಕೆ ಮಾಡಿಕೊಟ್ಟರು.

ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ,ಶಿವಮೊಗ್ಗ. ತೋಟಗಾರಿಕೆ ಮಹಾವಿದ್ಯಾಲಯ, ಹಿರಿಯೂರಿನ ಅಂತಿಮ ವರ್ಷದ ವಿದ್ಯಾರ್ಥಿಗಳು ಗ್ರಾಮೀಣ ತೋಟಗಾರಿಕೆ ಕಾರ್ಯಾನುಭವ ಕಾರ್ಯಕ್ರಮದ ಅಡಿಯಲ್ಲಿ ಕಸವನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಕೀಟನಾಶಕಗಳ ಬಳಕೆಯಲ್ಲಿ ವಹಿಸಬೇಕಾದ ಮುಂಜಾಗ್ರತೆ ಕ್ರಮಗಳ ಬಗ್ಗೆ ತರಬೇತಿ ಕಾರ್ಯಕ್ರಮ ನಡೆಸಿಕೊಟ್ಟರು. ರೈತರು ವಾಡಿಕೆಯಂತೆ ಹೆಚ್ಚಿನ ಮಟ್ಟದ ಕೀಟನಾಶಕಗಳನ್ನು ಬಳಸುತ್ತಾರೆ. ಸಾಮಾನ್ಯವಾಗಿ ಕೀಟನಾಶಕ ಮಣ್ಣಿನೊಳಗೆ ಸೇರಿಕೊಂಡು ನೇರವಾಗಿ ಮಣ್ಣಿನ ಫಲವತ್ತತೆಯನ್ನು ನಾಶಮಾಡುತ್ತದೆ ಹಾಗೂ ಸೂಕ್ಷ್ಮ ಜೀವಿಗಳ ಲಭ್ಯತೆಯು ದಿನದಿಂದ ದಿನಕ್ಕೆ ಕಡಿಮೆಯಾಗುತ್ತಿದೆ ಎಂದು ಹೇಳಿದರು.

ಹೀಗಾಗಿ ರೈತರು ಕೀಟನಾಶಕಗಳನ್ನು ಸರಿಯಾದ ಪ್ರಮಾಣದಲ್ಲಿ ಮತ್ತು ವಿಧಾನದಲ್ಲಿ ಬಳಕೆ ಮಾಡುವುದು ಸೂಕ್ತವೆಂದು ಅಂತಿಮ ವರ್ಷದ ವಿದ್ಯಾರ್ಥಿನಿ ಚೈತ್ರ ಅವರು ರೈತರಿಗೆ ತಿಳಿಸಿದರು. ಕೀಟನಾಶಕಗಳ ಸಿಂಪಡಣೆಯ ಸಂದರ್ಭದಲ್ಲಿ ತಪ್ಪದೇ ಮುಂಜಾಗ್ರತೆ ವಹಿಸಬೇಕು ಎಂದು ಹೇಳಿದರು.

ಸಂರಕ್ಷಿತ ಉಡುಪು, ಮಾಸ್ಕ್ ,ಬೂಟು , ಗ್ಲೌಸ್ ಗಳನ್ನು ಧರಿಸಿ ಕೀಟನಾಶಕ ಸಿಂಪಡಣೆ ಮಾಡಬೇಕು ಎಂದರು. ಸಿಂಪಡಣೆ ಮಾಡಿದ ನಂತರ ಕಡ್ಡಾಯವಾಗಿ ಚೆನ್ನಾಗಿ ಕೈಗಳನ್ನು ತೊಳೆಯಬೇಕು ಎಂದು ತಿಳಿಸಿದರು. ಕೀಟನಾಶಕ ಸಿಂಪಡಣೆ ಮಾಡುವ ಸಂದರ್ಭದಲ್ಲಿ ಬಳಸಬೇಕಾದ ಉಡುಪನ್ನು ರೈತರಿಗೆ ಮನಮುಟ್ಟುವಂತೆ ಪ್ರಾತ್ಯಕ್ಷಿಕೆ ಮೂಲಕ ಮನವರಿಕೆ ಮಾಡಿಕೊಡಲಾಯಿತು. ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಾದ ರಾಜಪ್ಪ, ರೈತ ಸಂಘದ ಸದಸ್ಯರಾದ ಕೃಷ್ಣಮೂರ್ತಿ, ಕಸವನಹಳ್ಳಿ ಗ್ರಾಮಸ್ಥರು, ಗ್ರಾಮದ ರೈತರು ಹಾಗೂ ಸ್ತ್ರೀ ಶಕ್ತಿ ಸಂಘದ ಮಹಿಳೆಯರು ಪ್ರಾತ್ಯಕ್ಷಿಕೆಯಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮವನ್ನು ತೋಟಗಾರಿಕೆ ಮಹಾವಿದ್ಯಾಲಯ ಹಿರಿಯೂರಿನ ವಿದ್ಯಾರ್ಥಿಗಳಾದ ಗೌತಮ್, ಸುದೀಪ್, ಪವನ್, ರಾಕೇಶ್, ಕಾವೇರಿ, ಅಂಜುಮ್, ಬಿಂದುಶ್ರೀ, ರಕ್ಷಿತಾ, ಅಂಬಿಕಾ, ಅಪರ್ಣ, ಶ್ರೇಯಾ, ನವೀನ್, ಜನಾರ್ದನ್ ಕಾರ್ಯಕ್ರಮ ನಡೆಸಿಕೊಟ್ಟರು.

## ಸಮಾಜದಲ್ಲಿ ಸುಖ, ಶಾಂತಿ ನೆಲೆಸಲು ಸನ್ನಡೆತೆಯೇ ಆಧಾರ



» **ಚಳ್ಳಕೆರೆ**

ಪ್ರತಿಯೊಬ್ಬ ವ್ಯಕ್ತಿಯೂ ಸನ್ನಡೆತೆಯನ್ನು ರೂಪಿಸಿಕೊಂಡಾಗ ಮಾತ್ರ ಗುರಿಯನ್ನು ಸಾಧಿಸಲು ಸಾಧ್ಯವಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಕೆಟ್ಟಹವ್ಯಾಸಗಳಿಗೆ ಬಲಿಯಾಗುವ ಅನೇಕರು ಕಂಟಕಪ್ರಾಯರಾಗಿ ಬದುಕಬೇಕಾಗುತ್ತದೆ. ಆದ್ದರಿಂದ ಸನ್ನಡೆತೆಯ ಮೂಲಕ ಉತ್ತಮ ಗುರಿತಲುಪೋಣವೆಂದು ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಲಯ ಮೇಲ್ವಿಚಾರಕ ಸಂತೋಷ್ ತಿಳಿಸಿದರು.

ನಗರದ ಕುವೆಂಪು ಆಂಗ್ಲಮಾದ್ಯಮ ಶಾಲೆಯಲ್ಲಿ ಕಸಬಾ ವಲಯದ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ದಶಕಗಳಿಂದ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಇಂತಹ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವುದು ಹೆಮ್ಮೆಯ ವಿಷಯ ಎಂದರು.ಸಂಪನ್ಮೂಲ ವ್ಯಕ್ತಿ, ವಕೀಲೆ ಮಧುಮತಿ ಮಾತನಾಡಿ, ಶಾಲಾ, ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಶಿಕ್ಷಕರು ಹಾಗೂ ಪೋಷಕರ ಮಾರ್ಗದರ್ಶನದಂತೆ ನಡೆಯಬೇಕು. ಕಲಿಕೆಯ ಎಂಬ ಸಾಗರದಲ್ಲಿ ಈಜಾಡಿ ಹೊರಬರಬೇಕು. ಯಾವವ್ಯಕ್ತಿ ತನ್ನ ಗುರುಸಾಧನೆಗೆ ದೃಢಹೆಜ್ಜೆ ಇಡುತ್ತಾನೋ ಅಂತಹ ವ್ಯಕ್ತಿಗಳಿಂದ ಮಾತ್ರ ಸಮಾಜದಲ್ಲಿ ಬದಲಾವಣೆಯನ್ನು ಕಾಣಬಹುದು ಎಂದು ತಿಳಿಸಿದರು.

ಐಟಿಐ ಪ್ರಾಂಶುಪಾಲ ರಮೇಶ್, ಆಡಳಿತಾಧಿಕಾರಿ ತಿಪ್ಪೇಸ್ವಾಮಿ, ಮುಖ್ಯೋಪಾಧ್ಯಾಯ ಎನ್.ತಿಪ್ಪೇಸ್ವಾಮಿ, ಸೇವಾ ಪ್ರತಿನಿಧಿ ಬೇಬಿ, ಎಂ.ಎನ್.ಮೃತ್ಯುಂಜಯ ಇದ್ದರು.

# ವರವುಗ್ರಾಮದ ದುರ್ಗಮ್ಮ, ದಾದಮ್ಮನವರಿಗೆ ವಾತ್ಸಲ್ಯಮನೆಗಳ ಹಸ್ತಾಂತರ

**ಚಳ್ಳಕೆರೆ:** ಕಳೆದ ಹಲವಾರು ದಶಕಗಳಿಂದ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳಾ ಸ್ವಸಹಾಯ ಗುಂಪುಗಳು ಸೇರಿ ಜನಪರ ಕಾರ್ಯಕ್ರಮಗಳ ಅನುಷ್ಠಾನದ ಮೂಲಕ ಜನರನ್ನು ತಲುಪುವ ಕೆಲಸ ಪ್ರಾಮಾಣಿಕವಾಗಿ ಮಾಡುತ್ತಿದೆ. ರೈತರು, ಕಾರ್ಮಿಕರು, ಯುವಕರು, ವಿದ್ಯಾರ್ಥಿಗಳು, ಕೆರೆಕಟ್ಟೆಗಳ ನಿರ್ಮಾಣ, ದೇವಸ್ಥಾನ ಜೀರ್ಣೋದ್ದಾರ ಮುಂತಾದ ಯೋಜನೆಗಳು ಜನರ ವಿಶ್ವಾಸಗಳಿಸುವಲ್ಲಿ ಯಶಸ್ವಿಯಾಗಿದೆ ಎಂದು ಜಿಲ್ಲಾ ನಿರ್ದೇಶಕ ಜನಾರ್ಧನ್ ತಿಳಿಸಿದರು. ಅವರು, ನಾಯಕನಹಟ್ಟಿ ಹೋಬಳಿಯ ವರವು ಗ್ರಾಮದ ವಾಸದ ಮನೆಇಲ್ಲದೆ ಸಂಕಷ್ಟಕ್ಕೀಡಾಗಿದ್ದ ದುರ್ಗಮ್ಮ ಮತ್ತು ದಾದಮ್ಮ ಎಂಬುವವರಿಗೆ ವಾತ್ಸಲ್ಯ ಯೋಜನೆಯಡಿ ಎರಡು ನೂತನ ಮನೆ ನಿರ್ಮಿಸಿ ಫಲಾನುಭವಿಗಳಿಗೆ ಹಸ್ತಾಂತರಿಸಿ ಮಾತನಾಡಿದರು. ಪ್ರತಿಯೊಬ್ಬರೂ ಸಮಾನತೆ ಬದುಕು ರೂಪಿಸಿಕೊಳ್ಳಬೇಕೆಂಬ ತತ್ವಕ್ಕೆ ಬದ್ಧವಾಗಿದ್ದೇವೆ, ಮುಂದಿನ ದಿನಗಳಲ್ಲೂ ಸಹ ವಾತ್ಸಲ್ಯ ಯೋಜನೆಯಡಿ ನಿರ್ಗತಿಕರಿಗೆ ಮನೆಗಳನ್ನು ನೀಡುವ ಕಾರ್ಯ ಮುಂದುವರೆಯಲಿದೆ ಎಂದರು. ನಾಯಕನಹಟ್ಟಿ ವಲಯಯೋಜನಾಧಿಕಾರಿ ಅಣ್ಣಪ್ಪ ಮಾತನಾಡಿದರು. ಈ ಸಂದರ್ಭದಲ್ಲಿ ವಲಯ ಸೌಮ್ಯರಾಣಿ, ಯಶೋಧ, ಮಹಾಲಕ್ಷ್ಮಿ ಮುಂತಾದವರು ಉಪಸ್ಥಿತರಿದ್ದರು.



## ಪ್ರಮುಖ ಸುದ್ದಿ

# ಅಂಬಿಗರ ಚೌಡಯ್ಯ ಜಯಂತಿ ಅರ್ಥಪೂರ್ಣ ಆಚರಣೆ

» **ಚಿತ್ರದುರ್ಗ**



ಜಿಲ್ಲಾ ಕೇಂದ್ರದಲ್ಲಿ ಜ. 21 ರಂದು ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಹೇಳಿದರು.

ಅಂಬಿಗರ ಚೌಡಯ್ಯ ಜಯಂತಿ ಆಚರಣೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಮಂಗಳವಾರಏರ್ಪಡಿಸಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿಜಶರಣ ಅಂಬಿಗರ ಚೌಡಯ್ಯನವರು ತಮ್ಮ ವಚನಗಳ ಮೂಲಕ ಇಡೀ ಮನುಕುಲಕ್ಕೆ ಉತ್ತಮ ಸಂದೇಶಗಳನ್ನು ನೀಡಿದ್ದಾರೆ.ಅವರವಚನಗಳನ್ನುಬಿತ್ತರಿಸುವ ಮೂಲಕ ಜಯಂತಿ ಆಚರಣೆಯನ್ನು ಅರ್ಥಪೂರ್ಣವಾಗಿಸಲಾಗುವುದು. ಜಯಂತಿಯನ್ನು ಜ. 21 ರಂದು ಸರ್ಕಾರಿ ಕಾರ್ಯಕ್ರಮವಾಗಿ ಆಚರಿಸಲಾಗುತ್ತಿದ್ದು, ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಣ, ವಿತರಣೆ ನಡೆಯಲಿದೆ. ಅಂಬಿಗರ ಚೌಡಯ್ಯ ನವರ ಭಾವಚಿತ್ರಕ್ಕೆ ವಿಶೇಷ ಪುಷ್ಪಾಲಂಕಾರವನ್ನು ನಗರಸಭೆ ವತಿಯಿಂದ ಕೈಗೊಳ್ಳಲಾಗುವುದು. ಅಂಬಿಗರ ಚೌಡಯ್ಯನವರು ರಚಿಸಿರುವ ವಚನ ಗಾಯನ ಕಾರ್ಯಕ್ರಮವನ್ನು ಕಲಾವಿದರಿಂದ ಹಮ್ಮಿಕೊಂಡು, ಸಂಪನ್ಮೂಲ ವ್ಯಕ್ತಿಯಿಂದ ವಿಶೇಷ ಉಪನ್ಯಾಸ ಕೂಡ ಏರ್ಪಡಿಸಲಾಗುವುದು. ಕಾರ್ಯಕ್ರಮಕ್ಕೆ ಎಲ್ಲ ಸಮಾಜದ ಬಾಂಧವರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಮನವಿ ಮಾಡಿದರು. ಸಮಾರಂಭ ಏರ್ಪಡಿಸುವ ಸ್ಥಳದ ಬಗ್ಗೆ ಸಭೆಯಲ್ಲಿ ಒಮ್ಮತ ವ್ಯಕ್ತವಾಗದ ಹಿನ್ನೆಲೆಯಲ್ಲಿ, ಸಮಾಜ ಬಾಂಧವರು ಚರ್ಚಿಸಿ, ನಿರ್ಣಯ ಕೈಗೊಂಡು, ಜಿಲ್ಲಾಡಳಿತಕ್ಕೆ ತಿಳಿಸಲಾಗುವುದು ಎಂದು ಸಮಾಜದ ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು. ಅಲ್ಲದೆ, ಜಯಂತಿ ಆಚರಣೆಗೆ ಸರ್ಕಾರ ನೀಡುವ ಅನುದಾನ ಮೊತ್ತವನ್ನು ಕನಿಷ್ಟ 3 ಲಕ್ಷ ರೂ. ಗೆ ಹೆಚ್ಚಿಸಬೇಕು. ಗಂಗಾಮತಸ್ಥ ಸಮಾಜಕ್ಕೆ 2 ಎಕರೆ ಜಮೀನನ್ನು ಒದಗಿಸಬೇಕು, ಈ ನಿಟ್ಟಿನಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಸಮಾಜದ ಮುಖಂಡರು ಇದೇ ಸಂದರ್ಭದಲ್ಲಿ ಒತ್ತಾಯಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್, ಗಂಗಾಮತಸ್ಥ ಸಮಾಜದ ಮುಖಂಡರುಗಳಾದ ಹೆಚ್.ಡಿ. ರಂಗಯ್ಯ, ಶ್ರೀನಿವಾಸ್, ಆರ್. ಜಯಣ್ಣ, ಎಸ್. ಕೃಷ್ಣಮೂರ್ತಿ, ಓಂಕಾರ್, ಎಸ್.ಡಿ. ರಾಮಸ್ವಾಮಿ, ರವಿಚಂದ್ರಪ್ಪ ಮಂಜುನಾಥ್, ಮಹೇಶ ಭಾಗವಹಿಸಿದ್ದರು.

**ಫಾಸ್ಟ್ ನ್ಯೂಸ್**

## ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿ ಬಗ್ಗೆ ಹೆಚ್ಚು ಒತ್ತು ನೀಡಿ: ವಿ.ನಾರಾಯಣರಾವ್





» **ಚಳ್ಳಕೆರೆ**

ಶಾಲಾ ಹಂತದಲ್ಲೇ ವಿದ್ಯಾರ್ಥಿಗಳು ತಮ್ಮ ಕಲಿಕೆಯ ಜೊತೆಯಲ್ಲಿ ಸಕ್ರಿಯಾವಾಗಿ ಕ್ರೀಡಾಚಟುವಟಿಕೆಗಳಲ್ಲೂ ತೊಡಗಿಕೊಳ್ಳಬೇಕು. ಕ್ರೀಡೆಯಿಂದವಿದ್ಯಾರ್ಥಿಗಳಕ್ರಿಯಾಶೀಲತೆಹೆಚ್ಚುತ್ತದೆ. ದೈಹಿಕ ಶಕ್ತಿಯ ಸಹಕಾರದಿಂದ ಬುದ್ದಿಶಕ್ತಿಯನ್ನು ಬೆಳೆಸಿಕೊಳ್ಳುವಲ್ಲಿವಿದ್ಯಾರ್ಥಿಗಳುಮುಂದಾಗಬೇಕು. ಸಾಮಾಜಿಕ ಚಿಂತನೆಗಳತ್ತ ಗಮನನೀಡಬೇಕೆಂದು ಶಿಕ್ಷಣಪ್ರೇಮಿ, ಅಶೋಕ ಸ್ಪೋರ್ಟ್ಸ್‌ಕ್ಲಬ್ ಸಂಸ್ಥಾಪಕ ವಿ.ನಾರಾಯಣರಾವ್‌ಮೋಹಿತೆ ತಿಳಿಸಿದರು.

ಅವರು, ನಗರದ ವೀರಶೈವ ಕಲ್ಯಾಣಮಂಟಪದಲ್ಲಿ ಸಹ್ಯಾದ್ರಿಶಿಕ್ಷಣ ಸಂಸ್ಥೆಯ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಳೆದ ಹತ್ತಾರು ವರ್ಷಗಳಿಂದ ಸಹ್ಯಾದ್ರಿಶಿಕ್ಷಣ ಸಂಸ್ಥೆಯ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದಿದ್ದೇನೆ, ವಿದ್ಯಾರ್ಥಿಗಳನ್ನು ಉತ್ತಮಪ್ರಜೆಯನ್ನಾಗಿ ರೂಪಿಸುವವ್ಯವಸ್ಥೆಇಲ್ಲಿದೆಎಂದರು.ಪ್ರಾಸ್ತಾವಿಕವಾಗಿ ಮಾತನಾಡಿದ ಸಂಸ್ಥೆ ಅಧ್ಯಕ್ಷ ನಾಗರೆಡ್ಡಿ, ಚಳ್ಳಕೆರೆ ನಗರದಲ್ಲಿ ಸುಮಾರು ಎರಡು ದಶಕಗಳಿಂದ ನಮ್ಮ ಸಂಸ್ಥೆ ಕಾರ್ಯನಿರ್ವಹಿಸುತ್ತಾಬಂದಿದೆ. ಇತ್ತೀಚಿನ ದಿನಗಳಲ್ಲಿ ಖಾಸಗಿ ವಿದ್ಯಾಸಂಸ್ಥೆಗಳು ಪೋಷಕರಿಂದ ಹಣಪಡೆಯುವುದೇ ಪ್ರಮುಖಅಂಶವಾಗಿ ಬಿಂಬಿಸಲಾಗುತ್ತಿದೆ. ಆದರೆ, ನಮ್ಮ ಸಂಸ್ಥೆ ಇಂದಿಗೂ ಸಹ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ದಿಗೆ ಪ್ರಾಮಾಣಿಕ ಸೇವೆ ಸಲ್ಲಿಸುತ್ತಿದೆ. ಪೋಷಕರು ಉತ್ತಮ ಸಹಕಾರ ನೀಡುತ್ತಿದ್ದಾರೆ. ಆಡಳಿತಮಂಡಳಿ ಮತ್ತು ಶಿಕ್ಷಕರ ಸಮೂಹ ಪ್ರಗತಿಪರ ಚಿಂತನೆಗಳನ್ನು ಅಳವಡಿಸಿಕೊಂಡಿದೆ ಎಂದರು. ಮುಖ್ಯಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಸೈನ್ಸ್‌ಫೌಂಡೇಷನ್ ಎಚ್‌ಎಸ್‌ಟಿಸ್ವಾಮಿ, ಖಾಸಗಿ ವಿದ್ಯಾಸಂಸ್ಥೆಗಳು ಇಂದು ವಿಜ್ಞಾನದ ಬೆಳವಣಿಗೆಗೆ ಪೂರಕವಾಗುವ ಕಾರ್ಯಕ್ರಮಗಳನ್ನು ನಿರೂಪಿಸುತ್ತಾ ಬಂದಿವೆ. ಶಾಲೆಗಳ ವಿಜ್ಞಾನಮೇಳದ ಸಂದರ್ಭದಲ್ಲಿ ವಿದ್ಯಾರ್ಥಿಗಳು ಚಕಿತರಾಗುವಂತ ಹೊಸ, ಹೊಸ ಮಾದರಿಗಳನ್ನು ಸಿದ್ದಪಡಿಸುತ್ತಿರುವುದು ತೃಪ್ತಿತಂದಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಾಜಿ ಪುರಸಭಾ ಸದಸ್ಯ ಎಚ್.ವಿ. ಪ್ರಸನ್ನಕುಮಾರ್(ಹೊಸಮನೆಸ್ವಾಮಿ) ಶೈಕ್ಷಣಿಕ ಅಭಿವೃದ್ದಿಯನ್ನು ಗುರಿಯಾಗಿರಿಸಿಕೊಂಡು ಕಾರ್ಯನಿರ್ವಹಿಸುವ ವಿದ್ಯಾಸಂಸ್ಥೆಗಳು ಜನರ ಪ್ರಶಂಸೆಗೆ ಒಳಗಾಗುತ್ತವೆ. ನೀವು ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾದಾನಕ್ಕೆ ಬೆಲೆಕಟ್ಟಲು ಸಾಧ್ಯವಿಲ್ಲ. ನಿಮ್ಮ ಸೇವೆ ಹೀಗೆ ಮುಂದುವರೆಯಲಿಎಂದು ಆಶಿಸುವುದಾಗಿತಿಳಿಸಿದರು.ಕಾರ್ಯಕ್ರಮದಲ್ಲಿಸಂಸ್ಥೆ ಕಾರ್ಯದರ್ಶಿ ಎಚ್.ಮಂಜುನಾಥ, ಉಪಾಧ್ಯಕ್ಷ ಎಚ್.ವಿ.ರಾಮ್‌ಪ್ರಸಾದ್, ಮುಖ್ಯೋಪಾಧ್ಯಾಯ ಮಲ್ಲಿಕಾರ್ಜುನ್, ಶಿಕ್ಷಕರಾದ ಶಿವಯೋಗಿ, ಪವಿತ್ರ ಮುಂತಾದವರು ಉಪಸ್ಥಿತರಿದ್ದರು.

## ಸಿದ್ದೇಶ್ವರನ ದುರ್ಗ ಗ್ರಾಪಂ ಅಧ್ಯಕ್ಷೆಯಾಗಿ ಲಿಖಿತಹರ್ತಿ ಆಯ್ಕೆ



» **ಪರಶುರಾಂಪುರ**

ಹೋಬಳಿಯ ಸಿದ್ದೇಶ್ವರನದುರ್ಗಗ್ರಾಮ ಪಂಚಾಯಿತಿಅಧ್ಯಕ್ಷ ಸ್ಥಾನಕ್ಕೆ ಮಂಗಳವಾರ ನಡೆದಚುನಾವಣೆಯಲ್ಲಿ ಪಿಲ್ಲಹಳ್ಳಿಯ ಲಿಖಿತಹರ್ತಿಎಮ್ ಮೌರ್ಯಅಧ್ಯಕ್ಷರಾಗಿ ಹಾಗೂ ರಂಗನಾಥ್‌ಉಪಾಧ್ಯಕ್ಷರಾಗಿಅವಿರೋಧವಾಗಿಆಯ್ಕೆಯಾದರು.ತೆರವಾಗಿದ್ದಅಧ್ಯಕ್ಷರ ಸ್ಥಾನಕ್ಕೆ ನಡೆದಚುನಾವಣೆಗೆ ಲಿಖಿತಹರ್ತಿಎಮ್ ಮೌರ್ಯ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ರಂಗನಾಥ್ ನಾಮ ಪತ್ರ ಸಲ್ಲಿಸಿದ್ದರು. ಬೇರೆ ನಾಮಪತ್ರಗಳು ಸಲ್ಲಿಕೆಯಾಗದಕಾರಣ ತಹಶೀಲ್ದಾರ್ ರೆಹಮಾನ್ ಪಾಷಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸಿಅವಿರೋಧಆಯ್ಕೆ ಪ್ರಕಟಿಸಿದರು.ನೂತನಅಧ್ಯಕ್ಷೆ ಲಲಿತಾಹರ್ತಿಎಮ್ ಮೌರ್ಯ ಮಾತನಾಡಿ, ಅವಿರೋಧಆಯ್ಕೆಗೆ ಸಹಕರಿಸಿದ ಎಲ್ಲ ಸದಸ್ಯರಿಗೆಅಭಿನಂದನೆ ಸಲ್ಲಿಸಿದರು.ಕ್ಷೇತ್ರದ ಸಮಸ್ಯೆಗಳ ಪರಿಹಾರಕ್ಕಾಗಿ ಶ್ರಮಿಸುತ್ತೇನೆ. ಪಕ್ಷಾತೀತ ನೆಲೆಯಲ್ಲಿಅಭೀವೃದ್ಧಿ ಕಾರ್ಯಗಳನ್ನು ಹಂತ ಹಂತವಾಗಿ ಕೈಗೊಳ್ಳುತ್ತೇನೆ ಎಂದು ಭರವಸೆ ನೀಡಿದರುಜಿ ಈ ವೇಳೆಯಲ್ಲಿ ಗ್ರಾಪಂ ಸದಸ್ಯರು, ಪಿಡಿಓ, ಹಿರಿಯರು ಮುಖಂಡರು,ಗ್ರಾಮಸ್ಥರು,ಗ್ರಾಪಂ ಸಿಬ್ಬಂದಿ ಉಪಸ್ಥಿತರಿದ್ದರು.

# ಅಕ್ಷರ ಕ್ರಾಂತಿಯುಂಟು ಮಾಡಿದ ಸಾವಿತ್ರಿಬಾಯಿಪುಲೆ ದೇಶ ಕಂಡಂತ ಅಪ್ರತಿಮ ದಿಟ್ಟ ಮಹಿಳೆ: ಹನುಮಂತಪ್ಪ

» **ಚಿತ್ರದುರ್ಗ**



ಅಕ್ಷರ ಕ್ರಾಂತಿಯುಂಟು ಮಾಡಿದ ಸಾವಿತ್ರಿಬಾಯಿಪುಲೆ ದೇಶ ಕಂಡಂತ ಅಪ್ರತಿಮ ದಿಟ್ಟ ಮಹಿಳೆ ಎಂದು ಮಾದಿಗ ಮಹಾಸಭಾ ರಾಜ್ಯಾಧ್ಯಕ್ಷ ಹನುಮಂತಪ್ಪ ದುರ್ಗಾ ತಿಳಿಸಿದರು.

ಸಾವಿತ್ರಿಬಾಯಿಪುಲೆರವರ 194 ನೇ ಜಯಂತಿ ಅಂಗವಾಗಿ ಜಿಲ್ಲಾ ಮಾದಿಗ ಯುವ ಸೇನೆಯಿಂದ ಪತ್ರಕರ್ತರ ಭವನದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಮನುವಾದಿಗಳು, ಬ್ರಾಹ್ಮಣರಿಗಷ್ಟೆ ಶಿಕ್ಷಣ ಮೀಸಲಾಗಿದ್ದ ಕಾಲದಲ್ಲಿ ಸಾವಿತ್ರಿಬಾಯಿಪುಲೆ ಮಹಿಳೆಯರಲ್ಲಿ ಅಕ್ಷರ ಜಾಗೃತಿಯನ್ನುಂಟು ಮಾಡಲು ಮುಂದಾದಾಗ ಅನೇಕ ಸಂಕಷ್ಟ

ಅವಮಾನಗಳನ್ನು ಅನುಭವಿಸಿದ್ದುಂಟು. ಒಂದು ಗ್ರಾಮದಿಂದ ಮತ್ತೊಂದು ಗ್ರಾಮಕ್ಕೆ ಶಿಕ್ಷಣ ಕಲಿಸಲು ಹೋಗುತ್ತಿದ್ದಾಗ ಆಕೆಯ ಮೇಲೆ ಸಗಣಿ, ಕೆಸರು, ಕಲ್ಲುಗಳನ್ನು ಎಸೆಯುತ್ತಿದ್ದರು. ಇವೆಲ್ಲವನ್ನು ತಾಳ್ಮೆಯಿಂದ ಸಹಿಸಿಕೊಂಡು ಅಕ್ಷರ ಕಲಿಸಿದಂತ ಧೀರ ಮಹಿಳೆ ಎಂದು ಸ್ಮರಿಸಿದರು.

ಕೇಂದ್ರ ಗೃಹ ಸಚಿವ ಅಮಿತ್‌ಷಾ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ ಬಗ್ಗೆ ಸಂಸತ್‌ನಲ್ಲಿ ಕೇವಲವಾಗಿ ಮಾತನಾಡಿರುವುದನ್ನು ದಲಿತ ರಾಜಕಾರಣಿಗಳು ವಿರೋಧಿಸುತ್ತಿಲ್ಲ. ಕುರ್ಚಿಗೆ ಅಂಟಿಕೊಂಡಿದ್ದಾರೆ. ಇದರ ವಿರುದ್ದ ದಲಿತರು ಜಾಗೃತರಾಗಬೇಕೆಂದು ಎಚ್ಚರಿಸಿದರು.

ಉಪನ್ಯಾಸಕ ಡಾ.ಎಂ.ವೇದಾಂತ ಏಳಂಜಿ ಮಾತನಾಡಿ ಶೋಷಿತ ಜನಾಂಗಕ್ಕೆ ಅಕ್ಷರ ಕಲಿಸಬೇಕೆಂದು ಸಾವಿತ್ರಿಬಾಯಿಪುಲೆ, ಜ್ಯೋತಿಪುಲೆ ದಂಪತಿಗಳು 160 ವರ್ಷಗಳ ಹಿಂದೆ ಅಕ್ಷರ ಕ್ರಾಂತಿಯುಂಟು ಮಾಡಿದರು. ಜಾತಿ ಧರ್ಮಗಳ ಆಚೆ ಈ ದಂಪತಿಗಳು ಅಸ್ಪೃಶ್ಯತಾ ನಿವಾರಣೆಗಾಗಿ ಶ್ರಮಿಸಿದವರು. ದೇಶದ ಮೊದಲ ಶಿಕ್ಷಕಿ ಸಾವಿತ್ರಿಬಾಯಿ ಪುಲೆರವರನ್ನು ಸರ್ಕಾರ ಗೌರವಿಸಬೇಕಾಗಿದೆ ಎಂದು ಹೇಳಿದರು.

ಕೇಶಮುಂಡನ ವಿರುದ್ದ ಹೋರಾಡಿದ ಈ ದಂಪತಿಗಳು ಅಂತರ್‌ಜಾತಿ ವಿವಾಹವನ್ನು ಪ್ರೋತ್ಸಾಹಿಸುತ್ತಿದ್ದರು. ಮಹಿಳಾ ಸೇವಾ ಮಂಡಳಿ, ಹಾಸ್ಟೆಲ್‌ಗಳಿಗೆ ಒತ್ತು ವಿಧವೆಯವರಿಗೆ ಆಶ್ರಯ ನೀಡುತ್ತಿದ್ದರು. ಸಾವಿತ್ರಿಬಾಯಿಪುಲೆರವರ ಲೇಖನಗಳನ್ನು ಓದಿಕೊಂಡು ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಪ್ರೇರೇಪಿತರಾಗಿದ್ದರು ಎಂದು ಸ್ಮರಿಸಿದರು.

ದಲಿತಮುಖಂಡಬಿ.ರಾಜಪ್ಪಮಾತನಾಡಿ ದೇಶದ ಪ್ರಥಮ ಮಹಿಳಾ ಶಿಕ್ಷಕಿಯಾಗಿದ್ದ ಸಾವಿತ್ರಿಬಾಯಿಪುಲೆ ಶಾಲೆ ತೆರೆದು ಎಲ್ಲಾ ಜಾತಿಯವರಿಗೆ ಅಕ್ಷರ ಕಲಿಸಿದರು. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರಥಮ ಆದ್ಯತೆ ನೀಡುತ್ತಿದ್ದ ಸಾವಿತ್ರಿಬಾಯಿ ಪುಲೆ ಅನೇಕ ನೋವು ಅವಮಾನಗಳನ್ನು ಅನುಭವಿಸಿದರು. ಅಕ್ಷರ ಕಲಿಸುವುದರಿಂದ ಹಿಂದೆ ಸರಿಯಲಿಲ್ಲ. ಅಂಬೇಡ್ಕರ್‌ರವರ ಆಶಯದಂತೆ ಶಿಕ್ಷಣ, ಸಂಘಟನೆ, ಹೋರಾಟ ಎಲ್ಲರ ಧ್ಯೇಯವಾಗಬೇಕೆಂದರು.

ಭೋವಿ ಸಮಾಜದ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ ಮಾತನಾಡುತ್ತ ಹೆಣ್ಣು ಮಕ್ಕಳು ಶಿಕ್ಷಣವಂತರಾಗಬೇಕೆಂಬುದು ಜ್ಯೋತಿಬಾಯಿ ಪುಲೆರವರ ಕನಸಾಗಿತ್ತು. ಇದಕ್ಕೆ ಅವರ ಪತಿ ಜ್ಯೋತಿಬಾಪುಲೆರವರ ಪ್ರೋತ್ಸಾಹವಿತ್ತು. ಜ್ಯೋತಿಬಾಯಿಪುಲೆ ಶಿಕ್ಷಣ ಕಲಿಸಲು ಹೋಗುತ್ತಿದ್ದಾಗ ಬ್ರಾಹ್ಮಣ್ಯರು ಕಲ್ಲು, ಸಗಣಿ, ಕೆಸರಿನಿಂದ ಹೊಡೆಯುತ್ತಿದ್ದರು. ಇದ್ಯಾವುದಕ್ಕೂ ಎದೆಗುಂದುತ್ತಿರಲಿಲ್ಲ. ದಲಿತ ನಾಯಕರುಗಳಾದ ಪ್ರೊ.ಬಿ.ಕೃಷ್ಣಪ್ಪ, ಎಂ.ಜಯಣ್ಣನವರು ದಿಟ್ಟ ಹೋರಾಟಗಾರರಾಗಿದ್ದರು. ಅಂತಹ ಹೋರಾಟಗಾರರು ಈಗಿನ ಸಮಾಜಕ್ಕೆ ಬೇಕಿದೆ. ಜ್ಯೋತಿಬಾಯಿಪುಲೆರವರ ಆಸೆಯಂತೆ ಹೆಣ್ಣುಮಕ್ಕಳು ಶಿಕ್ಷಣವಂತರಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕೆಂದರು.

ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನದಲ್ಲಿ ಎಲ್ಲಾ ಜಾತಿ ಧರ್ಮದವರಿಗೂ ಸಮಾನವಾದ ಹಕ್ಕು ನೀಡಿದ್ದಾರೆ. ಹೋರಾಟದಿಂದ ಮಾತ್ರ ದಲಿತರು ನ್ಯಾಯ ಪಡೆಯಲು ಸಾಧ್ಯ. ಮನುವಾದಿಗಳು ದಲಿತರ ವಿರುದ್ದ ಪಿತೂರಿ ನಡೆಸುತ್ತಿದ್ದಾರೆ. ಬುದ್ದ, ಬಸವ, ಅಂಬೇಡ್ಕರ್ ಇವರುಗಳು ಈ ನಾಡಿನಲ್ಲಿ ಹುಟ್ಟದೆ ಇರದಿದ್ದರೆ ದಲಿತರ ಸ್ಥಿತಿ ಶೋಚನೀಯವಾಗಿರುತ್ತಿತ್ತು ಎಂದು ವಿಷಾಧಿಸಿದರು.

ಸತ್ಯಪ್ಪ ಮಲ್ಲಾಪುರ, ಕಣಿವೆಮಾರಮ್ಮ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ ಬೆಳಗಟ್ಟ, ಹನುಮಂತಪ್ಪ ಗೋನೂರು, ತಿಪ್ಪೇಸ್ವಾಮಿ ಇವರುಗಳು ವೇದಿಕೆಯಲ್ಲಿದ್ದರು.

# ಹಿರಿಯ ನಾಗರೀಕರ ಆರೋಗ್ಯದ ಬಗ್ಗೆ ಗಮನಿಸಿ

» **ಚಳ್ಳಕೆರೆ**




ಪ್ರತಿಯೊಬ್ಬ ವ್ಯಕ್ತಿಯೂ ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚು ಒತ್ತುನೀಡಬೇಕಾಗುತ್ತದೆ. ನಮ್ಮೆಲ್ಲರಿಗೂ ಪ್ರಪಂಚದಲ್ಲಿ ನಡೆಯುವ ವಿದ್ಯಾಮಾನಗಳನ್ನು ಕಣ್ತುಂಬಿಕೊಳ್ಳಲು ನಮ್ಮ ಕಣ್ಣುಗಳನ್ನು ಸುರಕ್ಷತೆಯಿಂದ ಕಾಪಾಡಿಕೊಳ್ಳಬೇಕಿದೆ. ಕಣ್ಣುದೇಹದ ಅತಿಮುಖ್ಯಅಂಗವಾಗಿದೆ. ದೃಷ್ಟಿಯಿಂದಲೇ ಸೃಷ್ಟಿ ಎಂಬುವುದನ್ನು ನಾವೆಲ್ಲರೂ ಅರಿಯಬೇಕೆಂದು ಜಿಲ್ಲಾ ಅಂದತ್ವ ನಿವಾರಣಾಧಿಕಾರಿ ಡಾ.ನಾಗರಾಜು ತಿಳಿಸಿದರು.

ನಗರದ ಸರ್ಕಾರಿ ನೌಕರರ ಭವನದಲ್ಲಿ ಹಮ್ಮಿಕೊಂಡಿದ್ದ ಹಿರಿಯನಾಗರೀಕರಿಗೆ ಉಚಿತ ನೇತ್ರದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು. ಸರ್ಕಾರ ಹಿರಿಯ ನಾಗರೀಕರಿಗಾಗಿ ಉಚಿತ ನೇತ್ರ ತಪಾಸಣಾ ಶಿಬಿರವನ್ನು ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಆಯೋಜಿಸಿದ್ದು, ಹಿರಿಯ ನಾಗರೀಕರು ಇದರ ಪ್ರಯೋಜನವನ್ನು ಪಡೆಯುವಂತೆ ಮನವಿ ಮಾಡಿದರು.

ಜಿಲ್ಲಾ ಅಂಗವಿಲಕ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, ಸರ್ಕಾರ ಹಿರಿಯ ನಾಗರೀಕರ ಉಚಿತ ನೇತ್ರತಪಾಸಣಾ ಶಿಬಿರದ ಮೂಲಕ ಅವರ ಕಣ್ಣುಗಳಿಗೆ ಆಗುವ ತೊಂದರೆಯನ್ನು ನಿಯಂತ್ರಿಸಲು ಈ ಯೋಜನೆ ರೂಪಿಸಿದೆ. 2024–25ನೇ ಸಾಲಿನ ಸರ್ಕಾರದ ನಿಯಮಗಳ ಪ್ರಕಾರ ಆರು ತಾಲ್ಲೂಕು ಕೇಂದ್ರಗಳಲ್ಲಿ ಈ ಕಾರ್ಯಕ್ರಮ ಆಯೋಜಿಸಿದೆ. ವಿಕಲಚೇತನ ಇಲಾಖೆಯೂ ಸೇರಿದಂತೆ ಎಲ್ಲಾ ಇಲಾಖೆ ಸಹಯೋಗದೊಂದಿಗೆ ಈ ಕಾರ್ಯಕ್ರಮ ಆಯೋಜಿಸಿದೆ ಎಂದರು.

ಸರ್ಕಾರ ಈ ಯೋಜನೆಯ ಅನುಷ್ಠಾನದಿಂದ ಹಿರಿಯ ನಾಗರೀಕರ ಆರೋಗ್ಯವನ್ನು ಸಂರಕ್ಷಿಸುವಲ್ಲಿ ಯಶಸ್ವಿ ಹೆಜ್ಜೆ ಇಟ್ಟಿದೆ. ಈ ಕಾರ್ಯಕ್ರಮ ನಿರಂತರವಾಗಿ ನಡೆಯಲಿದ್ದು, ಹಿರಿಯ ನಾಗರೀಕರು ಇಂತಹ ಉಚಿತ ನೇತ್ರದಾನ ಶಿಬಿರಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಕಣ್ಣಿನ ದೋಷಗಳನ್ನು ಸರಿಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ಜ.3ರಿಂದ10ರ ತನಕ ಈ ಕಾರ್ಯಕ್ರಮ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ನಡೆಯಲಿದ್ದು, ಎರಡು ಕಣ್ಣಿನ ಪೊರೆಗಳ ಚಿಕಿತ್ಸೆಗೆ ಸರ್ಕಾರ ನೆರವು ನೀಡಲಿದೆ ಎಂದು ತಿಳಿಸಿದರು.ನೇತ್ರತಜ್ಞರಾದ ಡಾ.ಶಿಲ್ಪ, ಪಾಂಚಜನ್ಯ, ಆಶಾ, ನವೀನ್ ಕುಮಾರ್ ಉಪಸ್ಥಿತರಿದ್ದರು.



ಹೊಳಲ್ಕೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರುಗಳ ಸ್ಥಾನಕ್ಕೆ ನಡೆದ ಜಿದ್ದಾಜಿದ್ದಿನ ಚುನಾವಣೆಯಲ್ಲಿ ಮಾಧುರಿ ಗಿರೀಶ್ ಗುಂಪಿಗೆ ಜಯ.

## ಗೃಹ ಮಂತ್ರಿ ಅಮಿತ್‌ಷಾ ಅವರನ್ನು ಸಂಪುಟದಿಂದ ವಜಾಗೊಳಿಸಿ




» **ಚಿತ್ರದುರ್ಗ**

ದೇಶಕ್ಕೆ ಭದ್ರವಾದ ಸಂವಿಧಾನ ನೀಡಿರುವ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಹೆಸರೇಳುವ ಬದಲು ದೇವರನ್ನು ಸ್ಮರಿಸಿದರೆ ಸ್ವರ್ಗ ಪ್ರಾಪ್ತಿಯಾಗುತ್ತದೆಂದು ಕೇಂದ್ರ ಗೃಹ ಸಚಿವ ಅಮಿತ್‌ಷಾ ಸಂಸತ್‌ನಲ್ಲಿ ಹಗುರುವಾಗಿ ಮಾತನಾಡಿರುವುದನ್ನು ವಿರೋಧಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ದಾದಾ ಸಾಹೇಬ್ ಎನ್.ಮೂರ್ತಿ ಸ್ಥಾಪಿತ ಬಣದಿಂದ ಒನಕೆ ಓಬವ್ವ ವೃತ್ತದ ಸಮೀಪ ಮಂಗಳವಾರ ಧರಣಿ ಸತ್ಯಾಗ್ರಹ ನಡೆಸಲಾಯಿತು.ಸಾಂಸ್ಕೃತಿಕ ಚಿಂತಕ ಜೆ.ಯಾದವರೆಡ್ಡಿ ಧರಣಿಯನ್ನುದ್ದೇಶಿಸಿ ಮಾತನಾಡುತ್ತ ಜವಾಬ್ದಾರಿ ಸ್ಥಾನದಲ್ಲಿರುವ ಕೇಂದ್ರ ಗೃಹ ಮಂತ್ರಿ ಅಮಿತ್‌ಷಾ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಬಗ್ಗೆ ಕೀಳಾಗಿ ಮಾತನಾಡಿರುವುದನ್ನು ದೇಶದ ಪ್ರಧಾನಿ ನರೇಂದ್ರಮೋದಿ ಸಮರ್ಥಿಸಿಕೊಳ್ಳುತ್ತಿರುವುದು ದೊಡ್ಡ ದುರಂತ. ತಕ್ಷಣವೇ ಸಂಪುಟದಿಂದ ವಜಾಗೊಳಿಸುವಂತೆ ಒತ್ತಾಯಿಸಿದರು. ಬೇರೆ ದೇಶಗಳಲ್ಲಿ ಯಾರಾದರೂ ಇಂತಹ ಹೇಳಿಕೆಗಳನ್ನು ನೀಡಿದ್ದರೆ ಕ್ಷಣದಲ್ಲೆ ಅಧಿಕಾರದಿಂದ ಕೆಳಗಿಳಿಸುತ್ತಿದ್ದರು. ಸಂವಿಧಾನಕ್ಕೆಅಪಚಾರವೆಸಗುತ್ತಿರುವ ಅಮತ್‌ಷಾರವರ ಹೇಳಿಕೆಯನ್ನು ಸಾಮಾಜಿಕ ಬದ್ದತೆಯಿರುವ ಪ್ರತಿಯೊಬ್ಬರು ವಿರೋಧಿಸುವಂತೆ ಮನವಿ ಮಾಡಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಸಿ.ಹೆಚ್. ಮಂಜುನಾಥ್ ಮಾತನಾಡಿ ದೇಶ ವಿದೇಶಗಳಲ್ಲಿ ಓದಿ 30 ಡಿಗ್ರಿಗಳನ್ನು ಪಡೆದಿರುವ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರನ್ನು ಸಂಸತ್‌ನಲ್ಲಿ ಹಗುರುವಾಗಿ ಮಾತನಾಡಿರುವ ಕೇಂದ್ರ ಗೃಹ ಮಂತ್ರಿ ಅಮಿತ್‌ಷಾರವರನ್ನು ಸಂಪುಟದಿಂದ ತಕ್ಷಣವೇ ವಜಾಗೊಳಿಸುವಂತೆ ಆಗ್ರಹಿಸಿದರು. ಮಹಾನ್ ಮಾನವತಾವಾಧಿ ಡಾ.ಬಿ.ಆರ್.ಅಂಬೇಡ್ಕರ್ ಎರಡು ವರ್ಷಗಳ ಕಾಲ ಅಧ್ಯಯನ ನಡೆಸಿ ಪವಿತ್ರ ಗ್ರಂಥ ಸಂವಿಧಾನವನ್ನು ಕೊಡುಗೆಯಾಗಿ ನೀಡಿರುವ ಮೌಲ್ಯ ಅರಿಯದ ಗೃಹ ಸಚಿವ ಅಮಿತ್‌ಷಾ ಕೇವಲವಾಗಿ ಮಾತನಾಡಿರುವುದು ಇಡಿ ದೇಶವೇ ತಲೆ ತಗ್ಗಿಸುವಂತಾಗಿದೆ. ಪ್ರಧಾನಿ ನರೇಂದ್ರಮೋದಿರವರು ಸಮರ್ಥನೆ ಮಾಡಿಕೊಳ್ಳುವ ಬದಲು ತಕ್ಷಣದಿಂದಲೆ ಅಮಿತ್‌ಷಾರನ್ನು ಸಂಪುಟದಿಂದ ವಜಾಗೊಳಿಸಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು.ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ, ಹೊನ್ನೂರಪ್ಪ, ಆರ್.ಭೀಮಣ್ಣ, ಶಶಿಕುಮಾರ್, ಮಹೇಶ್, ಕರಿಬಸಪ್ಪ ಚನ್ನಿಗರಾಮಯ್ಯ, ನಿವೃತ್ತ ಪಿ.ಯು. ಡಿ.ಡಿ.ಪಿ.ಐ. ಬಿ.ಆರ್.ಶಿವಕುಮಾರ್, ಮಹಲಿಂಗಪ್ಪ ಇನ್ನು ಅನೇಕರು ಧರಣಿಯಲ್ಲಿ ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ಶರಣ ಸಾಹಿತ್ಯ ಸಮ್ಮೇಳನ: ಸಮ್ಮೇಳನಾಧ್ಯಕ್ಷರಿಗೆ ಆಮಂತ್ರಣ

» **ಚಿತ್ರದುರ್ಗ**



ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್, ಮೈಸೂರು ಇವರವತಿಯಿಂದ ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಅನುಭವ ಮಂಟಪದಲ್ಲಿ ಬರುವ ಜನವರಿ 18 ಮತ್ತು19 ನೇ ತಾರೀಖು ಹಮ್ಮಿಕೊಂಡಿರುವ ಹದಿಮೂರನೇ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಬೀದರ್‌ನ ಸಿದ್ದರಾಮ ಶರಣರು ಬೆಲ್ದಾಳ ಅವರನ್ನು ಸಮ್ಮೇಳನದ ಕಾರ್ಯಕಾರಿ ಸಮಿತಿಯ ಪದಾಧಿಕಾರಿಗಳು ಬೆಂಗಳೂರು ಜಯನಗರದ ಸುತ್ತೂರು ಮಠದಲ್ಲಿ ಭೇಟಿಯಾಗಿ ಆಮಂತ್ರಣ ಪತ್ರಿಕೆ ಹಾಗೂ ಸಮ್ಮೇಳನದ ಪತ್ರವನ್ನು ನೀಡಿ ಶಾಲು ಹೊದಿಸಿ,ಹಾರ ಹಾಕಿ, ಫಲ ನೀಡಿ ಅಭಿಮಾನ ಪೂರ್ವಕವಾಗಿ ಆಮಂತ್ರಿಸಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ಸಿ. ಸೋಮಶೇಖರ್ ಪ್ರಧಾನ ಕಾರ್ಯದರ್ಶಿ ಡಾ.ಕೆ .ಎಂ.ವೀರೇಶ್, ಖಜಾಂಚಿ ಹಂಪಯ್ಯ ಚಿಕ್ಕಪ್ಪನಹಳ್ಳಿ ಸೋಮಶೇಖರ್, ಯೋಗ ಗುರು ವೈದ್ಯ ಶ್ರೀ ಚೆನ್ನಬಸವಣ್ಣ, ಸಮ್ಮೇಳನದ ಸ್ವಾಗತ ಸಮಿತಿಯ ಖಜಾಂಚಿ ಎಸ್. ಷಣ್ಮುಖಪ್ಪ , ಅಖಿಲ ಭಾರತ ವೀರಶೈವ ಮಹಾಸಭಾದ ಚಿತ್ರದುರ್ಗ ಜಿಲ್ಲಾ ಘಟಕದ ಅಧ್ಯಕ್ಷರಾದ ಮಹಡಿ ಶಿವಮೂರ್ತಿ, ಬಿ .ಎಂ. ರುದ್ರೇಶ್ ಸೇರಿದಂತೆ ಬೆಲ್ದಾಳ ಶರಣರ ಅನುಯಾಯಿಗಳು, ಅಭಿಮಾನಿಗಳು ಹಾಗೂ ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T